ಸಂಪಾದಕ:ಎಸ್.ಕೆ.ಒಡೆಯರ್ ಸ್ವಾಭಿಮಾನಿಗಳಪತ್ರಿಕೆ www.pavitrapraja.com

# ಪವಿತ್ರ ಪ್ರಜಾ

PAVITRAPRAJA Daily RNI:KARKAN: 2007/22780 ದಿನಪತ್ರಿಕೆ

e-mail:pavitrapraja@gmail.com KA/SK/CTA-806/21-23 Davanagere 9141920642

ಸಂಪುಟ:18 ಸಂಚಿಕೆ: 214 ದಿನಾಂಕ:03-07-2024 ಬುಧವಾರ ಪುಟ:4 ರೂ.2-00 ಉಪಸಂಪಾದಕರು: ಸುಪ್ರಿತ ಎಸ್. ಒಡೆಯರ್ ಎಂಬಿಎ Vol:18 Issuse:214 Date:03-07-2024 Wednesday page:4 Rs:2-00 subEditor: Supritha Wadeyar

# ಎನ್‌ಡಿಎ ಸಂಸದರಿಗೆ ಮೋದಿ ಪಾಠ

## ಸಂಸತ್ತಿನಲ್ಲಿ ರಾಹುಲ್ ಹೇಳಿಕೆ ಬೆನ್ನಲ್ಲೇ ಸದನದ ನಿಯಮ ಪಾಲಿಸಲು ಪ್ರಧಾನಿ ಕಿವಿ ಮಾತು

ನವದೆಹಲಿ:–

ಆಡಳಿತಾರೂಢ ಬಿಜೆಪಿ ನೇತೃತ್ವದ ಎನ್‌ಡಿಎ ಸರ್ಕಾರದ ವಿರುದ್ಧ ಲೋಕಸಭೆಯ ಪ್ರತಿಪಕ್ಷದ ನಾಯಕ ರಾಹುಲ್ ಗಾಂಧಿ ಅವರು ತೀವ್ರ ವಾಗ್ದಾಳಿ ನಡೆಸಿ ಆಡಳಿತ ಮತ್ತು ಪ್ರತಿ ಪಕ್ಷಗಳ ಸದಸ್ಯರ ನಡುವೆ ಕೋಲಾಹಲ ಉಂಟಾದ ಹಿನ್ನೆಲೆಯಲ್ಲಿ "ಸದನದಲ್ಲಿ ನಿಯಮಗಳನ್ನು ಅನುಸರಿಸಿ" ಮತ್ತು ಸದನದಲ್ಲಿ ನಡವಳಿಕೆ ಖಚಿತಪಡಿಸಿಕೊಳ್ಳಿ" ಎನ್ನುವ ಮಂತ್ರವನ್ನು ಎನ್‌ಡಿಎ ಸಂಸದರಿಗೆ ಪ್ರಧಾನಿ ನರೇಂದ್ರ ಮೋದಿ ಇಂದು ಸಲಹೆ ನೀಡಿದ್ದಾರೆ.

ಎಲ್ಲಾ ಸಂಸದರು ರಾಷ್ಟ್ರ ಸೇವೆಗಾಗಿ ಸಂಸತ್ತಿಗೆ ಬಂದಿದ್ದಾರೆ ಮತ್ತು ಎನ್‌ಡಿಎ ಸಂಸದರು ಇದಕ್ಕೆ ಹೆಚ್ಚಿನ ಆದ್ಯತೆ



ನೀಡಬೇಕು. ಸದನದಲ್ಲಿ ನಾವು ಹೇಗೆ ನಡೆದುಕೊಳ್ಳಬೇಕು ಎನ್ನುವುದನ್ನು ತಿಳಿದುಕೊಳ್ಳಬೇಕು ಎಂದು ಎನ್ ಡಿಎ ಮೈತ್ರಿಕೂಟದ ಸಂಸದರಿಗೆ ಕಿವಿಮಾತು ಹೇಳಿದರು.

ಬಿಜೆಪಿಯ ಉನ್ನತ ನಾಯಕರು ಮತ್ತು ಸಚಿವರು ಭಾಗವಹಿಸಿದ್ದ ಎನ್‌ಡಿಎ ಸಂಸದೀಯ ಪಕ್ಷದ ಸಭೆ ಉದ್ದೇಶಿಸಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ ಅವರು ಸಂಸದರು ತಮ್ಮ ಕ್ಷೇತ್ರ ಮತ್ತು ರಾಷ್ಟ್ರೀಯ ಮಹತ್ವದ ಸಮಸ್ಯೆಗಳನ್ನು ಪ್ರಸ್ತಾಪಿಸುವಾಗ ನಿಯಮಗಳನ್ನು ಅನುಸರಿಸಿ, ಪ್ರಧಾನಿ ಸಂಸದೀಯ ಪ್ರಜಾಪ್ರಭುತ್ವ ವ್ಯವಸ್ಥೆ ಕಾಪಾಡಿಕೊಳ್ಳಲು ಮತ್ತು ನಡವಳಿಕೆಯನ್ನು ಖಾತ್ರಿಪಡಿಸಿಕೊಳ್ಳಿ ಎಂದು ಸಲಹೆ ನೀಡಿದ್ದಾರೆ.

ಸತತ ಮೂರನೇ ಅವಧಿಗೆ ಪ್ರಧಾನಿಯಾಗಿ ಅಧಿಕಾರ ವಹಿಸಿಕೊಂಡ ನಂತರ ಎನ್‌ಡಿಎ ಸಂಸದರನ್ನು ಉದ್ದೇಶಿಸಿ ಅವರು ಮಾಡಿದ ಮೊದಲ ಭಾಷಣ ಇದಾಗಿದೆ.

ಸಭೆಯ ಬಳಿಕ ಮಾಹಿತಿ ನೀಡಿದ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು, ಎನ್‌ಡಿಎ ಸಂಸದರು ಪ್ರಧಾನ ಮಂತ್ರಿಯ ಮೂರನೇ ಅವಧಿಗೆ ಅಭಿನಂದನೆ ಸಲ್ಲಿಸಿದರು ಜೊತೆ ನಿರಂತರ ಬೆಂಬಲ ನೀಡುವ ಭರವಸೆ ನೀಡಿದ್ದಾರೆ ಎಂದರು

'ಪ್ರಧಾನಿ ಮೋದಿ ನಾಯಕತ್ವದಲ್ಲಿ ಮೈತ್ರಿ ಒಗ್ಗೂಡಿದೆ' ವಿಶೇಷವಾಗಿ ಅವರು ಪ್ರತಿಯೊಂದು ಅವಧಿಗೂ ಮುನ್ನ ಅವರ ನಾಯಕರಾಗಿ ಆಯ್ಕೆಯಾದಾಗ, ಸಂಸತ್ತಿನ ಅಧಿವೇಶನಗಳಲ್ಲಿ ಎನ್‌ಡಿಎ ಸಂಸದರ ಸಭೆಗಳನ್ನು ಉದ್ದೇಶಿಸಿ ಮಾತನಾಡುವುದು ಅವರಿಗೆ ಹೆಚ್ಚು ವಾಡಿಕೆಯಾಗಿದೆ ಎಂದರು.

ಸಭೆಯಲ್ಲಿ, ಪ್ರತಿಯೊಬ್ಬ ಸಂಸದರು ತಮ್ಮ ಕುಟುಂಬದೊಂದಿಗೆ 'ಪಿಎಂ ಸಂಗ್ರಹಾಲಯ'ಕ್ಕೆ ಭೇಟಿ ನೀಡಬೇಕು ಎಂದು ಪ್ರಧಾನಿ ಸಲಹೆ ನೀಡಿದ್ದಾ–ರೆ. "ಸಂಸದರು ತಮ್ಮ ಕ್ಷೇತ್ರದ ಸಮಸ್ಯೆಗಳನ್ನು ಪರಿಣಾಮಕಾರಿಯಾಗಿ ಮಂಡಿಸುವ ರೀತಿಯಲ್ಲಿ ನಡೆಯಬೇಕು. ಆಸಕ್ತಿಯಿರುವ ಮತ್ತು ಸಂಸತ್ತಿನಲ್ಲಿ ಕೈಗೆತ್ತಿಕೊಳ್ಳಬಹುದಾದ ವಿಷಯಗಳಲ್ಲಿ ಪರಿಣತಿ ಬೆಳೆಸಿಕೊಳ್ಳಿ. ಸಂಸದೀಯ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಅನುಸರಿಸಿ" ಎಂದು ಸಲಹೆ ನೀಡಿದ್ದಾ–ರೆ.

ಮಿತ್ರ ಪಕ್ಷಗಳ ಪಾತ್ರ ಹಿರಿದು

ಈ ಭಾರಿಯ ಎನ್‌ಡಿಎ ಸರ್ಕಾರದಲ್ಲಿ ಮಿತ್ರಪಕ್ಷಗಳ ಪಾತ್ರ ಮಹತ್ವದ್ದು ಎನ್ನುವುದನ್ನು ಮನವರಿಕೆ ಮಾಡಿಕೊಂಡಿರುವ ಪ್ರಧಾನಿ ನರೇಂದ್ರ ಮೋದಿ ಅವರು ಎಲ್ಲರನ್ನು ಜೊತೆಯಾಗಿ ಕೊಂಡೊಯ್ಯಲು ಮುಂದಾಗಿದ್ದಾರೆ.

2014 ರಿಂದ ಮೊದಲ ಬಾರಿಗೆ ಬಿಜೆಪಿಯು ಇತ್ತೀಚೆಗೆ ನಡೆದ ಚುನಾವಣೆಯಲ್ಲಿ ಲೋಕಸಭೆಯಲ್ಲಿ ಬಹುಮತವನ್ನು ಕಳೆದುಕೊಂಡಿರುವುದರಿಂದ ಮತ್ತು ಸರ್ಕಾರದ ಮುಂದುವರಿಕೆಗಾಗಿ ಮಿತ್ರಪಕ್ಷಗಳ ಮೇಲೆ ಅವಲಂಬಿತವಾಗಿರುವುದರಿಂದ ಎನ್‌ಡಿಎ ಸಭೆ ಮಹತ್ವ ಪಡೆದುಕೊಂಡಿದೆ.

## ಜು.5,6,7 ರಂದು ಫೋಟೋ ಟುಡೆ ಅಂತರಾಷ್ಟ್ರೀಯ ವಸ್ತು ಪ್ರದರ್ಶನ

ದಾವಣಗೆರೆ.ಜು.2:

ಕರ್ನಾಟಕ ವೀಡಿಯೋ ಮತ್ತು ಫೋಟೋ ಅಸೋಸಿಯೇಶನ್ ಮತ್ತು ಬೈಸೆಲ್ ಇಂಟ್ರಾಕ್ಷನ್ ಪ್ರೈ.ಲಿ ಅವರ ಸಹಯೋಗದೊಂದಿಗೆ ಜುಲೈ 5, 6 ಹಾಗೂ 7 ರಂದು ಬೆಂಗಳೂರು ಮಹಾನಗರದ ತ್ರಿಪುರ ವಾಸಿನಿ ಅರಮನೆ ಮೈದಾನದಲ್ಲಿ 21ನೇ ವರ್ಷದ 'ಫೋಟೋ ಟುಡೆ ಅಂತರಾಷ್ಟ್ರೀಯ ವಸ್ತು ಪ್ರದರ್ಶನ' ನಡೆಯಲಿದೆ ಎಂದು ಛಾಯಾ ಸುದ್ದಿ ಖಾಜಾಫೀರ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂತರ್ರಾಷ್ಟ್ರೀಯ ಮಟ್ಟದ ವಸ್ತು ಪ್ರದರ್ಶನದಲ್ಲಿ ರಾಷ್ಟ್ರೀಯ ಹಾಗೂ ಅಂತರಾಷ್ಟ್ರೀಯ ಮಟ್ಟದ ನೂರಾರು ಕಂಪನಿಗಳು ಭಾಗವಹಿಸಲಿದ್ದು, ಉಚಿತ ಕ್ಯಾಮರ ಸರ್ವೀಸ್ ಹಾಗೂ ಛಾಯಾಗ್ರಾಹಕರಿಗೆ ಉಪಯುಕ್ತ ಕಾರ್ಯಾಗಾರಗಳು ಸೇರಿದಂತೆ ಹಲವಾರು ಕಾರ್ಯಕ್ರಮಗಳು ನಡೆಯಲಿವೆ ಎಂದರು.

ಕಾರ್ಯಕ್ರದಲ್ಲಿ 45 ಕ್ಕೂ ಹೆಚ್ಚು ಸಾಧಕ ಛಾಯಾಗ್ರಾಹಕರಿಗೆ ಛಾಯಾ ರತ್ನ ಪ್ರಶಸ್ತಿ ಪ್ರದಾನ ಮಾಡಲಾಗುವುದು. ನಗರದ ಶಾಮನೂರು ರಸ್ತೆಯಲ್ಲಿರುವ ಕಳೆದ 30 ವರ್ಷಗಳಿಂದ ಫೋಟೋಗ್ರಫಿ ವೃತ್ತಿಯಲ್ಲಿ ಕೆಲಸ ನಿರ್ವಹಿಸುತ್ತಿರುವ ಶಂಕರ್ ಸ್ಟುಡಿಯೋ



ಮಾಲೀಕ ಶಂಕರ್ ಕಾಟ್ವೆ ಹಾಗೂ 23 ವರ್ಷಗಳಿಂದ ಫೋಟೋಗ್ರಾಫರ್ ಆಗಿ ಹಾಗೂ ಸಮಾಜ ಸೇವಕರಾಗಿ ಕಾರ್ಯನಿರ್ವಹಿಸುತ್ತಿರುವ ಇರುವ ಹರಿಹರದ ಎಸ್ ಎಲ್ ವಿ ಡಿಜಿಟಲ್ ಸ್ಟುಡಿಯೋ ಮಾಲೀಕ ಕೆ.ಎಂ. ವೆಂಕಟೇಶ್ ಅವರ ಸಾಧನೆ ಗುರುತಿಸಿ 'ಕರ್ನಾಟಕ ಛಾಯಾ ರತ್ನ ಪಶಸ್ತಿ' ಪ್ರದಾನ ಮಾಡಲಾಗುವುದು ಎಂದು ಮಾಹಿತಿ ನೀಡಿದರು.

ಕಾರ್ಯಕ್ರಮವನ್ನು ಸಂಸದ ತೇಜಸ್ವಿ ಸೂರ್ಯ ಉದ್ಘಾಟಿಸಲಿದ್ದು, ಶಾಸಕ ಎಸ್.ಆರ್. ವಿಶ್ವನಾಥ್, ಅಸೋಸಿಯೇಷನ್ ನ ಕೃಷ್ಣಪ್ಪ, ಜಗದೀಶ್, ಬೈಸಲ್ ಮುಖ್ಯಸ್ಥರಾದ ಬೆಂಜಮಿನ್ ಇನ್ನಿತರರು ಉಪಸ್ಥಿತರಿರುವರು ಎಂದು ತಿಳಿಸಿದರು.

ದಾವಣಗೆರೆ ತಾಲ್ಲೂಕು ಫೋಟೋ ಹಾಗೂ ವೀಡಿಯೋ ಗ್ರಾಫರ್ಸ್ ಸಂಘದ ಅಧ್ಯಕ್ಷ ಎಂ. ಮನು ಮಾತನಾಡಿ, ನಾಡಿನ ಛಾಯಾಗ್ರಹಣ ಕ್ಷೇತ್ರ–ಕ್ಕೆ ದುಡಿದ ಶ್ರೇಷ್ಠ ಛಾಯಾಗ್ರಾಹಕರಿಗೆ ನೀಡುವ ಗೌರವ 'ಕರ್ನಾಟಕದ ಛಾಯಾ ರತ್ನ' ಪಶಸ್ತಿ ಇದಾಗಿದ್ದು, ನಮ್ಮ ಜಿಲ್ಲೆಯ ಛಾಯಾಗ್ರಾಹಕನ್ನು ಗುರುತಿಸಿ ಪ್ರಶಸ್ತಿ ನೀಡಿದಕರ್ನಾಟಕ ವೀಡಿಯೋ ಮತ್ತು ಫೋಟೋ ಅಸೋಸಿಯೇಶನ್ ಮತ್ತು ಬೈಸೆಲ್ ಇಂಟ್ರಾಕ್ಷನ್ ಪ್ರೈ.ಲಿ ಬೆಂಗಳೂರು ಇವರಿಗೆ ದಾವಣಗೆರೆ ತಾಲ್ಲೂಕು ಫೋಟೋ ಮತ್ತು ವಿಡಿಯೋ ಗ್ರಾಫರ್ ಸಂಘ ಧನ್ಯವಾದಗಳು ತಿಳಿಸುತ್ತದೆ ಎಂದರು.

ಸುದ್ದಿಗೋಷ್ಠಿಯಲ್ಲಿ, ಸಂಘದ ಗ್ರಾಮಾಂತರ ವಲಯಾಧ್ಯಕ್ಷ ಕೊಂಡಜ್ಜಿ ರಾಜಶೇಖರ್, ಪ್ರಶಸ್ತಿಗೆ ಭಾಜನರಾದ ಶಂಕರ್ ಕಾಟ್ವೆ ಹಾಗೂ ಕೆ.ಎಂ. ವೆಂಕಟೇಶ್ ಉಪಸ್ಥಿತರಿದ್ದರು.

## ಬೆಲೆ ಏರಿಕೆ ಖಂಡಿಸಿ ಬಿಜೆಪಿ ರೈತ ಮೋರ್ಚಾ ಪ್ರತಿಭಟನೆ



ಚಿತ್ರದುರ್ಗ:–

ರಾಜ್ಯ ಸರ್ಕಾರದ ಬೆಲೆ ಏರಿಕೆ ನೀತಿಯನ್ನು ಖಂಡಿಸಿ ಬಿಜೆಪಿ ಜಿಲ್ಲಾ ರೈತ ಮೋರ್ಚಾದವರು ಜಿಲ್ಲಾಧಿಕಾರಿಗಳ ಕಚೇರಿ ಎದುರು ಎತ್ತಿನಗಾಡಿ ಮೇಲೆ ಬೈಕ್ ನ್ನು ಏರಿ, ದನಕರುಗಳ ಜೊತೆಗೆ ಪ್ರತಿಭಟನೆ ನಡೆಸಿದರು. ಹಾಲಿನ ದರವನ್ನು ರೂ.4ರಷ್ಟು ಏರಿಕೆ ಮಾಡಿ ಆ ಹಣವನ್ನು ರೈತರಿಗೆ ತಲುಪಿಸಲಾಗುವುದು ಎಂದು ಹೇಳಿಕೆ ಕೊಟ್ಟ, ಸರ್ಕಾರ ಇದುವರೆಗೂ ರೈತರಿಗೆ ತಲುಪಿಸದೆ, ಅಕ್ರಮ ಏಸಗಲಾಗಿದೆ. ಮತ್ತೇ ಈಗ ಅದೇ ಕಾರಣವನ್ನು ನೀಡಿ 2 ರೂ ಹೆಚ್ಚಿಸಲಾಗಿದ್ದು, 6 ರೂಗಳಲ್ಲಿ ರೈತರಿಗೆ ನೀಡಬೇಕು ಎಂದು ಒತ್ತಾಯಿಸಿದರು.ಕಳೆದ ಬಜೆಟ್ ನಲ್ಲಿ ಪ್ರೋತ್ಸಾಹ ಧನಕ್ಕೆ ಬಿಡುಗಡೆಯಾಗಿದ್ದ ಹಣವನ್ನು ಪಶುಪಲನಾ ಇಲಾಖೆ ಇತರೆ ಖರ್ಚು ವೆಚ್ಚಗಳಿಗೆ ಕಾಂಗ್ರೆಸ್ ಸರ್ಕಾರ ಬಳಕೆಮಾಡಿಕೊಂಡಿದ್ದು, ಈ ವಿಷಯದ ಬಗ್ಗೆ ಸರ್ಕಾರ ಸ್ಪಷ್ಟನೆಯನ್ನು ನೀಡಬೇಕು. ಅಲ್ಲದೆ, ಬಾಕಿ ಉಳಿದಿರುವ ಎಂಟು ತಿಂಗಳ ಹಣವನ್ನುಕೇಳಿದರೆ ಹಾಲು ಒಕ್ಕೂಟದ ಅಧಿಕಾರಿಗಳು ಸಹಕಾರಿ ಇಲಾಖೆಯತ್ತ ಬೊಟ್ಟು ಮಾಡುತ್ತಾರೆ. ಸಹಕಾರ ಇಲಾಖೆಯವರು ಆರ್ಥಿಕ ಇಲಾಖೆ ಮೇಲೆ ಬೊಟ್ಟು ಮಾಡುತ್ತಾರೆ. ಈ ಗೊಂದಲದ ನಿವಾರಣೆ ಮಾಡಿ, ಹಣ ಪಾವತಿ ಮಾಡಬೇಕು ಎಂದು ಒತ್ತಾಯಿಸಿದರು.ಹಾಲಿನ ಪ್ರೋತ್ಸಾಹ ಹಣವೂ ಇಲ್ಲ. ಬರ ಪರಿಹಾರದ ಹಣವೂ ಇಲ್ಲ, ಬಿತ್ತನೆ ಬೀಜಗಳ ಬೆಲೆ ಏರಿಕೆ–ಯಾಗಿದೆ. ಭೂ ಸಿರಿ ಯೋಜನೆಯನ್ನು ನಿಲ್ಲಿಸಲಾಗಿದೆ, ರೈತ ವಿದ್ಯಾನಿಧಿ ಯೋಜನೆಯನ್ನು ನಿಲ್ಲಿಸಲಾಗಿದೆ. ದುಪ್ಪಟ್ಟು ಹಣವನ್ನು ಟ್ರಾನ್ಸ್ ಫಾರ್ಮರ್ ಗಳಿಗೆ ನೀಡುವಂತಾಗಿದ್ದು, ಪೆಟ್ರೋಲ್, ಡೀಸೆಲ್ ಬೆಲೆಯನ್ನು ಏರಿಕೆ ಮಾಡಲಾಗಿದೆ. ಮುದ್ರಾಂಕ ದರವನ್ನು ಏರಿಸಿರಯವುದರಿಂದ ಆಸ್ತಿ ನೋಂದಣಿ ಶೇ.30 ರಷ್ಟು ಹೆಚ್ಚಾಗಿದೆ. ಕ್ಷೀರ ಸಮೃದ್ಧಿ ಬ್ಯಾಂಕ್ ಯಾಕೆ ಪ್ರಾರಂಭಿಸಿಲ್ಲ. ರೈತರಿಗೆ ನಿಕಟವಾಗಿರುವ ಕಂದಾಯ ಇಲಾಖೆಯಲ್ಲಿ ಭ್ರಷ್ಟಾಚಾರ ತಾಂಡವವಾಡುತ್ತಿದೆ ಆದರೂ ಮುಖ್ಯಮಂತ್ರಿ ಸಿದ್ದರಾಮಯ್ಯ ಕಣ್ಮುಚ್ಚಿ ಕುಳಿರುವುದುನ್ನು ನೋಡಿದರೆ ಭ್ರಷ್ಟಚಾರದಲ್ಲಿ ಸಿದ್ದರಾಮಯ್ಯ ಅವರು ಭಾಗಿಯಾಗಿರುವುದು ಕಂಡುಬರುತ್ತದೆ ಎಂದು ಆರೋಪಿಸಿದರು.ಈ ಕೂಡಲೇ ಸರ್ಕಾರ ರೈತರಿಗೆ, ದಿನ ದಲಿತರಿಗೆ, ಬಡ ವರ್ಗಕ್ಕೆ, ಕೂಲಿ ಕಾರ್ಮಿಕರಿಗೆ ಅನುಕೂಲ ಮಾಡಿಕೊಡುವ ನಿಟ್ಟಿನಲ್ಲಿ ಕ್ರಮಕೈಗೊಳ್ಳಬೇಕು ಎಂದು ಆಗ್ರಹಿಸಿ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

## ಜು.28 ರಂದು ಪದ್ಮಶಾಲಿ ಸಮಾಜದಿಂದ ಪ್ರತಿಭಾ ಪುರಸ್ಕಾರ




ದಾವಣಗೆರೆ:–

ಶ್ರೀ ಮಾರ್ಕಂಡೇಶ್ವರ ಪದ್ಮಶಾಲಿ (ನೇಕಾರ) ಯುವಕರ ಸಂಘದ ವತಿಯಿಂದ ಇದೇ ಜು.28 ರಂದು ನಗರದ ಎಸ್.ಕೆ.ಪಿ ರಸ್ತೆಯ ಶ್ರೀ ಮಾರ್ಕಂಡೇಶ್ವರ ಸಮುದಾಯ ಭವನದಲ್ಲಿ ಎಸ್.ಎಸ್.ಎಲ್.ಸಿ ಮತ್ತು ದ್ವಿತೀಯ ಪಿ.ಯು.ಸಿ. ಯಲ್ಲಿ ಹೆಚ್ಚಿನ ಅಂಕಗಳಿಸಿ ಉತ್ತೀರ್ಣರಾದ ಪದ್ಮಶಾಲಿ (ನೇಕಾರ) ಜನಾಂಗದ ಕುಲಭಾಂದವರಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಸಂಘದ ಅಧ್ಯಕ್ಷ ಪಿ.ಜಿ.ಶ್ರೀನಿವಾಸ್ ಹೇಳಿದರು. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಜು.28 ರ ಬೆಳಿಗ್ಗೆ 10 ಗಂಟೆಗೆ ಶ್ರೀ ಪ್ರಭುಲಿಂಗ ಸ್ವಾಮಿಗಳು ದೀಪ ಬೆಳಗಿಸಲಿದ್ದು, ಡಾ.ನಂಬಿಯಣ್ಣ.ಬಿ. ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಸಮಾಜದ ಅಧ್ಯಕ್ಷ ಪಿ.ಜೆ.ನಾಗರಾಜ್, ಸೇಪೂರ್ ಆನಂದ್ ಹಾಗೂ ಜೆ.ಟಿ.ರಾಮಕೃಷ್ಣ ಉಪಸ್ಥಿತಲಿರುವರು ಎಂದರು. ಎಸ್.ಎಸ್.ಎಲ್.ಸಿ ಮತ್ತು ದ್ವಿತೀಯ ಪಿ.ಯು.ಸಿ. ಯಲ್ಲಿ ಶೇ.80 ಕ್ಕೂ ಹೆಚ್ಚು ಅಂಕಗಳಿಸಿದ ಶ್ರೀ ಮಾರ್ಕಂಡೇಶ್ವರ ಪದ್ಮಶಾಲಿ (ನೇಕಾರ) ಸಮುದಾಯದ ವಿದ್ಯಾರ್ಥಿಗಳಿಗೆ ಮಾತ್ರ ಪ್ರತಿಭಾ ಪುರಸ್ಕಾರ ನೀಡಲಾಗುವುದು. ಜೊತೆಗೆ ಬೆಳಿಗ್ಗೆ 10 ರಿಂದ 11 ರವರೆಗೆ ರಂಗೋಲಿ ಸ್ಪದ–ರ್ೆ, ಚಿತ್ರಕಲಾ ಸ್ಪರ್ಧೆ ಆಯೋಜಿಸಲಾಗಿದೆ ಎಂದು ಹೇಳಿದರು.ಸುದ್ದಿಗೋಷ್ಠಿಯಲ್ಲಿ ಡಿ.ಎಸ್. ಶ್ರೀನಿವಾಸ, ಮಾರ್ಕಂಡೇಯ ಇ. ನರಾಲ್, ಪಿ.ರುದ್ರೇಶ್ ಇದ್ದರು.

## ಪತಿಯ ಪ್ರೇಯಸಿ ಮನೆ ಎದುರು ಪತ್ನಿ ಧರಣಿ

ದಾವಣಗೆರೆ:–

ಪತಿ ಮನೆಗೆ ಬರುತ್ತಿಲ್ಲ ಎಂದು ಆರೋಪಿಸಿ ಪೊಲೀಸ್ ಪೇದೆ–ಯ ಪತ್ನಿಯೊಬ್ಬರು ಪತಿಯು ಅನೈತಿಕ ಸಂಬಂಧ ಹೊಂದಿದ್ದ ಮಹಿಳೆಯ ಮನೆಯ ಮುಂಭಾಗದಲ್ಲಿ ಪ್ರತಿಭಟನೆ ನಡೆಸಿದ ಘಟನೆ ದಾವಣಗೆರೆಯಲ್ಲಿ ಜರುಗಿದೆ. 2013 ರಲ್ಲಿ ಹರಪನಹಳ್ಳಿ ತಾಲೂಕಿನ ಎರಡತ್ತೇನಹಳ್ಳಿ ಗ್ರಾಮದ ಪೊಲೀಸ್ ಕಾನ್ಸಸ್ಟೇಬಲ್ ಗೋಣಪ್ಪ ಎಂಬುವವನೊಂದಿಗೆ ಸೌಮ್ಯ ಅವರ ಮದುವೆಯಾಗಿತ್ತು. ಮದುವೆಯಾಗಿ ಸುಖ ಸಂಸಾರಕ್ಕೆ ಸಾಕ್ಷಿಯಾಗಿ ಇಬ್ಬರು ಮುದ್ದಾದ ಹೆಣ್ಣು ಮಕ್ಕಳು ಇದ್ದಾರೆ. ಆದರೆ ಇದೀಗ ಗೋಣೆಪ್ಪ ಗೀತಾ ಎಂಬ ಮಹಿಳೆಯೊಂದಿಗೆ ಅನೈತಿಕ ಸಂಬಂಧ ಇಟ್ಟುಕೊಂಡಿದ್ದಾನೆ ಎಂದು ಆರೋಪಿಸಿ ದಾವಣಗೆರೆಯ ರಾಮನಗರದಲ್ಲಿರುವ ಗೀತಾ ಅವರ ಮನೆಯ ಮುಂದೆ ಪೊಲೀಸ್ ಪೇದೆಯ ಪತ್ನಿ ಸೌಮ್ಯ ಮಕ್ಕಳೊಂದಿಗೆ ಪ್ರತಿಭಟನೆ ನಡೆಸುತ್ತಿದ್ದಾರೆ. ಗೋಣಪ್ಪ ನನ್ನನ್ನು ಸರಿಯಾಗಿ ನೋಡಿಕೊಳ್ಳುತ್ತಿಲ್ಲ, ಮನೆಗೆ ಬರ್ತಾ ಇಲ್ಲ, ಜೀವನಾಂಶ ಕೂಡ ಕೊಡ್ತಾ ಇಲ್ಲ ಎಂದು




ಸೌಮ್ಯ ಆರೋಪಿಸಿದ್ದಾರೆ.ಗೋಣಪ್ಪ ಪ್ರಸ್ತುತ ಬಳ್ಳಾರಿ ಜಿಲ್ಲೆಯ ಕಂಪ್ಲಿಯಲ್ಲಿ ಪೇದೆಯಾಗಿ ಕೆಲಸ ಮಾಡುತ್ತಿದ್ದಾರೆ. ದಾವಣಗೆರೆಯ ಕೆಟಿಜೆ ನಗರ ಪೊಲೀಸ್ ಠಾಣೆಯಲ್ಲಿ ಪೇದೆಯಾಗಿ ಕೆಲಸ ಮಾಡುತ್ತಿರುವಾಗ ಪ್ರಕರಣವೊಂದರಲ್ಲಿ ಗೀತಾ ಗೋಣಪ್ಪನಿಗೆ ಪರಿಚಯವಾಗಿದ್ದಾರೆ. ಅಲ್ಲಿಂದ ಇಬ್ಬರ ನಡುಗೆ ಪ್ರೇಮಾಂಕುರವಾಗಿದೆ. ಹಾಗಾಗಿ ಗೋಣಪ್ಪ ಗೀತಾಳೊಂದಿಗೆ ಇದ್ದು, ನನ್ನನ್ನು ಕಡೆ ಗಣಿಸಿದ್ದಾರೆಂದು ಸೌಮ್ಯ ಆರೋಪ ಮಾಡುತ್ತಿದ್ದಾರೆ. ಇನ್ನು ಸೌಮ್ಯ ಅವರಿಗೆ ಇಬ್ಬರು ಹೆಣ್ಣು ಮಕ್ಕಳಿದ್ದು ಇಬ್ಬರು ಅಸ್ತಮದಿಂದ ಬಳಲುತ್ತಿದ್ದು, ಚಿಕಿತ್ಸೆಗೆ ಹಣ ಇಲ್ಲದಂತಾಗಿದೆ ಎಂದು ಸೌಮ್ಯ ತಮ್ಮ ಅಳಲು ತೋಡಿಕೊಂಡಿದ್ದಾರೆ.

## ನಟ ಸಲ್ಮಾನ್ ಹತ್ಯೆಗೆ ಸಂಚು

ಮುಂಬೈ:–

ಬಾಲಿವುಡ್ ನಟ ಸಲ್ಮಾನ್ ಖಾನ್ ಹತ್ಯೆಗೆ ಸಂಚು ರೂಪಿಸಲಾಗಿತ್ತು. ಆಘಾತಕಾರಿ ಅಂಶ ಬೆಳಕಿಗೆ ಬಂದಿದೆ. ಕಳೆದ 8 ತಿಂಗಳ ಹಿಂದೆ ಹತ್ಯೆಗೆ ಸಂಚು ನಡೆಯುತ್ತಿತ್ತು. ಈ ಬಗ್ಗೆ ಪೊಲೀಸರು ನಿಗಾವಹಿಸಿದ್ದರು. ಇದರ ಬೆನ್ನಲ್ಲೇ ಈ ಆಘಾತಕಾರಿ ಅಂಶ ಬೆಳಕಿಗೆ ಬಂದಿದೆ.



ನಟ ಸಲ್ಮಾನ್ ಖಾನ್ ಅವರ ಚಲನವಲನಗಳ ಬಗ್ಗೆ ಬಿಷ್ಣೋಯ್ ಗ್ಯಾಂಗ್ ಕಣ್ಣೀಟ್ಟಿತ್ತು. ಸಲ್ಮಾನ್ ಖಾನ್ ಭಾಂದ್ರಾದಲ್ಲಿರುವ ಮನೆ ಫನ್ವೇಲ್ ಫಾಮ್ ಹೌಸ್ ಫಿಂ ಸಿಟಿಯ ಅವರ ಚಟುವಟಿಕೆಯ ವಿವರಗಳನ್ನು ಸಂಗ್ರಹಿಸಿದ್ದರು.

ಸಲ್ಮಾನ್ ಹತ್ಯೆಗೆ ಎಕೆ 47 ಎಂ 16 ಮತ್ತು ಎಕೆ –92 ಬಂದೂಕುಗಳನ್ನು ಬಳಸಿ ನೆರೆಯ ಪಾಕಿಸ್ತಾನದಿಂದ ಬಿಷ್ಣೋಯ್ ಗ್ಯಾಂಗ್ ತಂದಿದ್ದ ಅಲ್ಲದೆ ಸಲ್ಮಾನ್ ಖಾನ್ ಹತ್ಯೆಗೆ ಶೂಟರ್ ಗಳಿಗೆ 25 ಲಕ್ಷ ರೂಪಾಯಿಗಳ ಗುತ್ತಿಗೆ ನೀಡಲಾಯಿತು.

ಆ. 2023 ಮತ್ತು ಏಪ್ರಿಲ್ 2024 ರ ನಡುವೆ ಬಿಷ್ಣೋಯ್ ಗ್ಯಾಂಗ್ ಸಲ್ಮಾನ್ ಹತ್ಯೆಗೆ ಪಿತೂರಿ –3ನೇ ಪುಟಕ್ಕೆ

# ಕೃಷಿಕರ ಮನಸ್ಸು ಅರ್ಥ ಮಾಡಿದ್ದಕ್ಕೇ ಗೆದ್ದೆ: ಗವಿಯಪ್ಪ

ಹೊಸಪೇಟೆ (ವಿಜಯನಗರ):–

'ವಿಧಾನಸಭೆ ಚುನಾವಣೆಯಲ್ಲಿ ಎರಡು ಬಾರಿ ಸೋತ ನಂತರ ನಾನು ನನ್ನ ತೋಟದಲ್ಲಿ ಕೃಷಿ ಕಾರ್ಯದಲ್ಲಿ ತೊಡಗಿ–ಕೊಂಡೆ ಹಾಗೂ ಕೃಷಿಕರ ಮನಸ್ಸನ್ನು ಅರ್ಥ ಮಾಡಿಕೊಳ್ಳಲು ಪ್ರಯತ್ನಿಸಿದೆ. ಅದುವೇ ನನ್ನ ಗೆಲುವಿಗೆ ದಾರಿಮಾಡಿಕೊಟ್ಟಿತು' ಎಂದು ಶಾಸಕ ಎಚ್.ಆರ್.ಗವಿಯಪ್ಪ ಹೇಳಿದರು.

ಇಲ್ಲಿನ ಜಂಟಿ ಕೃಷಿ ನಿರ್ದೇಶಕರ ಕಚೇರಿಯಲ್ಲಿ ಭಾನುವಾರ ನಡೆದ 'ಹಸಿರಿನೊಂದಿಗೆ ಮಾತುಕತೆ'ಯ ವಾರ್ಷಿಕೋತ್ಸವ, ಪುಸ್ತಕ ಬಿಡುಗಡೆ ಮತ್ತು ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.



'ನಾನು ಯಾಕೆ ಸೋತೆ ಎಂಬ ಆತ್ಮಾವಲೋಕನ ನನ್ನ ತೋಟದಲ್ಲಿ ನನಗಾಯಿತು. ಕೃಷಿ ತೋಟದ ಸಾಂಗತ್ಯ ನನಗೆ ಒಂದಷ್ಟು ಮಾರ್ಗಗಳನ್ನು ತೋರಿಸಿತು. ಅದೇ ಕಾರಣದಿಂದ ರೈತರ ಕಷ್ಟಗಳ ಅರಿವೂ ಆಗಿದೆ. ಮಾಗಣೆ ರಸ್ತೆಗಳ ಸಮಸ್ಯೆ ನೀಗಿಸಿದರೆ ಕಬ್ಬು, ಇತರ ಕೃಷಿ ಉತ್ಪನ್ನಗಳ ಸಾಗಣೆ ವೆಚ್ಚ ತಗ್ಗುತ್ತದೆ, ಹೀಗಾಗಿ ಈ ರಸ್ತೆಗಳ ದುರಸ್ತಿ, ಸುಧಾರಣೆಗೆ ಹೆಚ್ಚಿನ ಗಮನ ಹರಿಸಿದ್ದೇನೆ' ಎಂದರು.

'ಹೊಸಪೇಟೆಗೆ ಸಕ್ಕರೆ ಕಾರ್ಖಾನೆ ಅಗತ್ಯವಿದ್ದು, ಅದರ ನಿರ್ಮಾಣಕ್ಕೆ ಸಾಧ್ಯವಿರುವ ಎಲ್ಲ ಪ್ರಯತ್ನ ಮಾಡುತ್ತಿದ್ದೇನೆ' ಎಂದು ಶಾಸಕರು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಜಂಟಿ ಕೃಷಿ ನಿರ್ದೇಶಕ ಶರಣಪ್ಪ ಮುದ್ಗಲ್ ಮಾತನಾಡಿ, ಕೃಷಿ ಪ್ರವಾಸೋದ್ಯಮಕ್ಕೆ ಈ ಭಾಗದಲ್ಲಿ ಸಾಕಷ್ಟು ಅವಕಾಶ ಇದ್ದು, ಇದಕ್ಕಾಗಿ ಕೆಲವು ಕಾನೂನುಗಳನ್ನು ಸಡಿಲಗೊಳಿಸಲು ಪ್ರಯತ್ನಿಸಬೇಕು ಎಂದು ಶಾಸಕರಲ್ಲಿ ಮನವಿ ಮಾಡಿದರು.

ಹಗರಿ ಕೃಷಿ ಕಾಲೇಜಿನ ಸಹ ಪ್ರಾಧ್ಯಾಪಕಿ ಶಿಲ್ಪಾ ಎಚ್. ಅವರು ಬಾಳೆಯ ಮೌಲ್ಯವರ್ಧನೆ ಬಗ್ಗೆ ಮಾಹಿತಿ ನೀಡಿದರೆ, ವಿಜಯನಗರ ಕಾಲುವೆಗಳ ಆಧುನೀಕರಣ ಯೋಜನೆಯ ತಂಡ ನಾಯಕ ಆರ್. ದೊರೆಸ್ವಾಮಿ ಅವರು ನೀರಿನ ನಿರ್ವಹಣೆ, ಕೃಷಿ ಕಾಲುವೆ, ಅಚ್ಚುಕಟ್ಟು ಪ್ರದೇಶಗಳ ಕುರಿತು ಮಾತನಾಡಿದರು. ಪ್ರಗತಿಪರ ಕೃಷಿಕ ವಿಶ್ವೇಶ್ವರ ಸಜ್ಜನ್ ಅವರು ಬೇಲದ ಮೌಲ್ಯವರ್ಧನೆ ಬಗ್ಗೆ ಮಾಹಿತಿ ನೀಡಿದರು. ಹಸಿರುನೊಂದಿಗೆ ಮಾತುಕತೆ ಮೊದಲ ಬಾರಿಗೆ ಆರಂಭವಾದ ತೋಟದ ಮಾಲೀಕ ಹಾಗೂ ಪ್ರಗತಿಪರ ಕೃಷಿಕ ಬಸಯ್ಯ ಸ್ವಾಮಿ ವೇದಿಕೆಯಲ್ಲಿದ್ದರು.

ಗಂಗಾವತಿ ಕೃಷಿ ಕಾಲೇಜಿನ ಕೀಟಶಾಸ್ತ್ರ ವಿಭಾಗದ ಮುಖ್ಯಸ್ಥ ಪ್ರೊ.ಬದರಿಪ್ರಸಾದ್ ಪಿ.ಆರ್. ಕೃತಿ ಪರಿಚಯ ಮಾಡಿದರು.

ಮಣ್ಣಿನ ಮಡಿಕೆಗೆ ಸಿರಿಧಾನ್ಯ ಸುರಿಯುವ ಮೂಲಕ ಕಾರ್ಯಕ್ರಮ ಉದ್ಘಾಟಿಸಲಾಯಿತು. ಬಿಡುಗಡೆ ಮಾಡಲಾದ ಪುಸ್ತಕದ ಮೊದಲ ಪ್ರತಿಯನ್ನು ಪುಸ್ತಕದ ಮುಖಪುಟದಲ್ಲಿರುವ ಮಹಿಳೆ ಫಕೀರಮ್ಮ ಅವರಿಗೆ ನೀಡಲಾಯಿತು. ಹಸಿರಿನೊಂದಿಗೆ ಮಾತುಕತೆ ಬಳಗದ ಸಂಚಾಲಕ ಮಲ್ಲಿಕಾರ್ಜುನ ಹೊಸಪಾಳ್ಯ ಪ್ರಾಸ್ತಾವಿಕ ಮಾತನಾಡಿದರು. ವಾರ್ಷಿಕೋತ್ಸವ ನೆನಪಿನಲ್ಲಿ ಜೆ.ಡಿ. ಕಚೇರಿ ಆವರಣದಲ್ಲಿ ಹೊಂಗೆ ಗಿಡವನ್ನು ಶಾಸಕರು ನೆಟ್ಟರು.

ಪರಮೇಶ್ವರ ನಾಯ್ಕ ಸ್ವಾಗತಿಸಿದರು. ವಸಂತ ಮಾಲವಿ ನಿರೂಪಿಸಿದರು. ಶಿವಕುಮಾರ್ ವಂದಿಸಿದರು.

**'ಕೃಷಿ ಅನುಭವಗಳ ಕಥನ'**

'ಹಸಿರು ಮಾತುಕತೆ' ಪುಸ್ತಕ ಒಂದು ವರ್ಷ ವಿಜಯನಗರ ಜಿಲ್ಲೆ ಮತ್ತು ಬಳ್ಳಾರಿ ಜಿಲ್ಲೆಯ ಸಂಡೂರಿನಲ್ಲಿ ನಡೆದ 'ಹಸಿರಿನೊಂದಿಗೆ ಮಾತುಕತೆ' ಕಾರ್ಯಕ್ರಮದ ಸಾರಾಂಶ ರೂಪದಲ್ಲಿದ್ದು, ಹಲವು ಪ್ರಗತಿಪರ ಕೃಷಿಕರ ಯಶೋಗಾಥೆ ಇದರಲ್ಲಿದೆ.

ಹುಲಿಕೆರೆಯ ವಿಶ್ವೇಶ್ವರ ಸಜ್ಜನ, ನಂದೀಪುರದ ಮಹೇಶ್ವರ ಸ್ವಾಮೀಜಿ, ಕಮಲಾಪುರದ ಪಂಪಯ್ಯ ಮಳೇಮಠ, ವೆಂಕಟಾಪುರದ ಅನ್ನಪೂರ್ಣ, ದೇವದಾಸಿ ಕೂಪದಿಂದ ಹೊರಬಂದು ಕೃಷಿ ಮಾಡುತ್ತಿರುವ ಈಶ್ವರಮ್ಮ, ಸಿರಿಧಾನ್ಯ ಬೆಳೆಯುವ ಪಾಪಿನಾಯಕನಹಳ್ಳಿಯ ಫಕೀರಮ್ಮ, ದೇಸೀ ಬೀಜ ಸಂರಕ್ಷಕ ಕಲ್ಲಪ್ಪ, ಅಕ್ಕಡಿ ಬೇಸಾಯದಲ್ಲಿ ಪರಿಣಿತರಾದ ಕೊಟ್ಟೂರಿನ ಕೋಟ್ರಪ್ಪ, ಅನಂತಶಯನಗುಡಿಯ ಪ್ರಸನ್ನ, ಅಹೊಸೂರಿನ ಸಣ್ಣಕ್ಕಿ ಕುಟುಂಬ, ಒಣಭೂಮಿ ತೋಟಗಾರಿಕೆ ಮಾಡುತ್ತಿರುವ ವಸಂತ ಮಾಲವಿ ಮುಂತಾದ 12 ರೈತರ ಕೃಷಿ ಬದುಕನ್ನು ಪುಸ್ತಕದಲ್ಲಿ ನಿರೂಪಿಸಲಾಗಿದೆ. ಜೊತೆಗೆ ವಿಜಯನಗರ ಅರಸರ ಕಾಲದಲ್ಲಿ ಇಲ್ಲಿನ ಕೃಷಿ ವಿವರಗಳು, ಈ ಜಿಲ್ಲೆಯ ವಿಶಿಷ್ಟ ಬಾಳೆ ತಳಿಗಳಾದ ಸಕ್ಕರೆ ಬಾಳೆ ಮತ್ತು ಸುಗಂಧಿ ಬಾಳೆ ಬಗ್ಗೆಯೂ ಮಾಹಿತಿ ನೀಡಿರುವುದು ಪುಸ್ತಕದ ವೈಶಿಷ್ಟ್ಯ.

## ಒಂದು ವರ್ಷದಿಂದ ವಶಪಡಿಸಿಕೊಂಡ ಕಳವು ಮಾಲು ಮಾಲಿಕರಿಗೆ ಹಸ್ತಾಂತರ



ಹೊಸಪೇಟೆ (ವಿಜಯನಗರ):–

ಜಿಲ್ಲೆಯಲ್ಲಿ ಕಳೆದ ಒಂದು ವರ್ಷದಲ್ಲಿ ಪೊಲೀಸರು ವಶಪಡಿಸಿಕೊಂಡ ಕಳವು ಮಾಲುಗಳನ್ನು ಅವುಗಳ ಮಾಲೀಕರಿಗೆ ಹಸ್ತಾಂತರಿಸುವ ಕಾರ್ಯಕ್ರಮ ಇಲ್ಲಿನ ಎಸ್‌ಪಿ ಕಚೇರಿಯಲ್ಲಿ ಸಂಜೆ ನಡೆಯಿತು. 1.78 ಕೋಟಿ ಮೌಲ್ಯದ ವಸ್ತುಗಳನ್ನು ಹಸ್ತಾಂತರಿಸಲಾಯಿತು. ಹತ್ತಾರು ಮಂದಿ ತಮ್ಮ ಕಳವಾದ ವಸ್ತುಗಳನ್ನು ಮರಳಿ ಪಡೆದ ಖುಷಿ ಅನುಭವಿಸಿದರು. ಚಿನ್ನದ ಸರಗಳು, ಬೆಳ್ಳಿಯ ಸಾಮಗ್ರಿಗಳು, ನಗದು, ಪಂಪ್‌ಸೆಟ್‌ಗಳು ಇದರಲ್ಲಿ ಸೇರಿದ್ದವು. ಜಿಲ್ಲಾ ಪೊಲೀಸ್ ವರಿಷ್ಠ ಶ್ರೀಹರಿಬಾಬು ಬಿ.ಎಲ್. ಅವರು ಇತರ ಹಿರಿಯ ಅಧಿಕಾರಿಗಳ ಜತೆಗೆ ವಶಪಡಿಸಿಕೊಂಡ ಸಾಮಗ್ರಿಗಳನ್ನು ಮೂಲ ಮಾಲೀಕರಿಗೆ ಹಸ್ತಾಂತರಿಸಿದರು. ಜಿಲ್ಲೆಯ ಮೂರೂ ಉಪವಿಭಾಗಗಳ ವ್ಯಾಪ್ತಿಯ ಪೊಲೀಸ್ ಠಾಣೆಗಳಲ್ಲಿ ದಾಖಲಾದ ಕಳವು ಪ್ರಕರಣಗಳು ಇದರಲ್ಲಿ ಸೇರಿದ್ದವು. 'ಕಳೆದ ವರ್ಷದ ಜೂನ್ 1ರಿಂದ ಈ ರ್ಷದ ಜೂನ್ 1ರವರೆಗಿನ ಕಳವು ಪ್ರಕರಣಗಳಲ್ಲಿ 254 ಸ್ವತ್ತಿನ ಪ್ರಕರಣಗಳು ವರದಿಯಾಗಿವೆ. ಈ ಅವಧಿಯಲ್ಲಿ ಲಾಭಕ್ಕಾಗಿ ಕೊಲೆ ನಡೆದಿಲ್ಲ. 4 ಡಕಾಯಿತಿ, 3 ಸರಗಳ್ಳತನ, 7 ಹಗಲು ಕನ್ನ ಹಾಕಿದ ಪ್ರಸಂಗ, 58 ರಾತ್ರಿ ಕನ್ನ ಹಾಕಿದ ಪ್ರಸಂಗ, 182 ಸಾಮಾನ್ಯ ಕಳತನ ಪ್ರಕರಣಗಳು ವರದಿಯಾಗಿವೆ. 87 ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದೆ. ಒಟ್ಟು 162 ಜನರನ್ನು ಬಂಧಿಸಿ ಕಾನೂನು ಪ್ರಕಾರ ಕ್ರಮ ಜರುಗಿಸಲಾಗಿದೆ' ಎಂದು ಎಸ್‌ಪಿ ಶ್ರೀಹರಿಬಾಬು ಬಿ.ಎಲ್. ಮಾಧ್ಯಮದವರಿಗೆ ತಿಳಿಸಿದರು. 'ಒಟ್ಟು 5.54 ಕೋಟಿ ಮೌಲ್ಯದ ವಸ್ತುಗಳು ಕಳವಾಗಿವೆ. 2.15 ಕೋಟಿ ಮೌಲ್ಯದ ಮಾಲುಗಳನ್ನು ವಶಪಡಿಸಿಕೊಳ್ಳಲಾಗಿದೆ. ಈ ಪೈಕಿ 1.78 ಕೋಟಿ ಮೌಲ್ಯದ ವಸ್ತುಗಳನ್ನು ವಾರಿಸುದಾರರಿಗೆ ಹಿಂದಿರುಗಿಸಲಾಗಿದೆ. 37.44 ಲಕ್ಷ ಮೌಲ್ಯದ ಮಾಲನ್ನು ನ್ಯಾಯಾಲಯದ ಆದೇಶ ಪಡೆದುಕೊಂಡು ಹಿಂದಿರುಗಿಸಲಾಗುವುದು' ಎಂದರು. 'ವಶಪಡಿಸಿಕೊಂಡ ಮಾಲುಗಳ ಪೈಕಿ 85 ಲಕ್ಷ ಮೌಲ್ಯದ 96 ದ್ವಿಚಕ್ರ ವಾಹನ, 42.31 ಲಕ್ಷ ಮೌಲ್ಯದ 118 ತೊಲೆ ಬಂಗಾರ, 95,300 ಮೌಲ್ಯದ 30 ತೊಲೆ ಬೆಳ್ಳಿ, 2.05 ಲಕ್ಷ ಮೌಲ್ಯದ 25 ಮೊಬೈಲ್, 11,71,580 ನಗದು, 3.50 ಲಕ್ಷ ಮೌಲ್ಯದ ಎಲೆಕ್ಟ್ರಾನಿಕ್ಸ್ ವಸ್ತುಗಳು, 37.45 ಲಕ್ಷ ಮೌಲ್ಯದ ಗಂಧದ ಕಟ್ಟಿಗೆ, ಟೊಯೊಟಾ ಕಾರು, 12.63 ಲಕ್ಷ ಮೌಲ್ಯದ ಸೋನಿ ಕ್ಯಾಮೆರಾ, 1 ಕಾರು, 1 ಸರ್ಕಾರಿ ಸಾರಿಗೆ ಬಸ್, 3 ಆಕಳು, 5 ಕುರಿ, 3 ಪಂಪ್‌ಸೆಟ್‌ಗಳು ಸೇರಿವೆ' ಎಂದು ಅವರು ಮಾಹಿತಿ ನೀಡಿದರು. ಬೆರಳಚ್ಚು ಪಡೆಯುವ ಸಾಧನ: ಜಿಲ್ಲೆಯಲ್ಲಿ ರಾತ್ರಿ ಹೊತ್ತಲ್ಲಿ ಸಂಶಯಾಸ್ಪದವಾಗಿ ಓಡಾಡುವವರ ಬೆರಳಚ್ಚು ಪಡೆದು ಸಂಗ್ರಹಿಸಿಟ್ಟುಕೊಳ್ಳುವ ಸಾಧನವನ್ನು ಪೊಲೀಸರಿಗೆ ಕೊಟ್ಟಿದ್ದು, ಇದುವರೆಗೆ 2,900 ಮಂದಿಯ ಬೆರಳಚ್ಚು ಸಂಗ್ರಹಿಸಲಾಗಿದೆ. ಕಳ್ಳರನ್ನು ವಶಕ್ಕೆ ಪಡೆಯುವಲ್ಲಿ ಈ ಸಾಧನ ಬಹಳಷ್ಟು ಮಟ್ಟಿಗೆ ನೆರವಿಗೆ ಬರುತ್ತಿದೆ. ಹಂಪಿ ಸಹಿತ ಪ್ರಮುಖ ಪ್ರವಾಸಿ ತಾಣಗಳಲ್ಲಿ ಸಿ.ಸಿ.ಟಿ.ವಿ.ಕ್ಯಾಮೆರಾಗಳನ್ನು ಅಳವಡಿಸುವ ಕೆಲಸ ಪೊಲೀಸ್ ಇಲಾಖೆಯಿಂದಲೂ ನಡೆಯುತ್ತಿದೆ ಎಂದು ಶ್ರೀಹರಿಬಾಬು ಹೇಳಿದರು. ಎಎಸ್‌ಪಿ ಸಲೀಂ ಪಾಷಾ, ಡಿವೈಎಸ್‌ಪಿಗಳಾದ ಮಂಜುನಾಥ್, ಮಹಾಂತೇಶ್ ಸಜ್ಜನ್, ಮಲ್ಲೇಶಪ್ಪ ಮಲ್ಲಾಪುರ ಇದ್ದರು.

## ರೈತರು ಬೆಳೆ ವಿಮೆ ನೋಂದಣಿ ಮಾಡಿಸಲು ಕರೆ



ಕೂಡ್ಲಿಗಿ:–

ಮಳೆಯಾಶ್ರಿತ ಪ್ರದೇಶವಾದ ಕೂಡ್ಲಿಗಿ ತಾಲೂಕಿನಲ್ಲಿ ರೈತರು ಕೃಷಿ ಇಲಾಖೆ ಸೂಚಿಸಿರುವ ಬೆಳೆಗಳಿಗೆ ಕೊನೆಯ ದಿನಾಂಕದೊಳಗೆ ತಪ್ಪದೇ ಬೆಳೆ ವಿಮೆಯನ್ನು ನೋಂದಣಿ ಮಾಡಿಸಿಕೊಳ್ಳಬೇಕೆಂದು ಶಾಸಕ ಡಾ.ಎನ್.ಟಿ.ಶ್ರೀನಿವಾಸ್ ತಿಳಿಸಿದರು.

ಅವರು ಪಟ್ಟಣದ ಪ್ರವಾಸಿ ಮಂದಿರದಲ್ಲಿದ ಇತ್ತೀಚೆಗೆ ಆಯೋಜಿಸಿದ್ದ ಜನತಾ ದರ್ಶನ ಕಾರ್ಯಕ್ರಮದ ಸಂದರ್ಭ ಕೃಷಿ ಇಲಾಖೆಯಿಂದ ಹಮ್ಮಿಕೊಂಡಿದ್ದ ಮಣ್ಣು ಸಂರಕ್ಷಣೆ ಹಾಗೂ ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆಯ ಪ್ರಚಾರ ವಾಹನಕ್ಕೆ ಚಾಲನೆ ನೀಡಿ ಮಾತನಾಡುತ್ತಾ ಅತಿವೃಷ್ಟಿ, ಅನಾವೃಷ್ಟಿಯಿಂದ ರೈತರು ಬೆಳೆ ನಷ್ಟವಾಗುವ ಸಂಭವ ಇರುವುದರಿಂದ ಪ್ರತಿಯೊಬ್ಬರೂ ಕೃಷಿ ಇಲಾಖೆ ನಿಗದಿಪಡಿಸಿದ ಬೆಳೆಗಳಿಗೆ ತಪ್ಪದೆ ಕೊನೆಯ ದಿನಾಂಕದೊಳಗೆ ಬೆಳೆವಿಮೆಯ ಕಂತನ್ನು ಪಾವತಿಸುವ ಮೂಲಕ ನೋಂದಣಿ ಮಾಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಕೃಷಿ ಇಲಾಖೆ ಜಂಟಿ ನಿರ್ದೇಶಕ ಶರಣಪ್ಪ ಮುದಗಲ್ ಮಾತನಾಡಿ, ಮುಂಗಾರು ಹಂಗಾಮಿನಲ್ಲಿ ಬೆಳೆ ವಿಮೆ ನೋಂದಣಿಗೆ ಸರಕಾರ ಮುಂದಾಗಿದ್ದು, ಕೃಷಿ ಇಲಾಖೆಯಿಂದ ಸೂಚಿಸಿರುವ ಬೆಳೆಗಳಿಗೆ ಹತ್ತಿರದ ಬ್ಯಾಂಕ್ ಇಲ್ಲವೆ ಗ್ರಾಮ ಒನ್ ಕೇಂದ್ರಗಳಲ್ಲಿ ಬೆಳೆ ವಿಮೆ ಕಂತು ಪಾವತಿಸುವ ಮೂಲಕ ನೋಂದಣಿ ಮಾಡಿಕೊಳ್ಳಬೇಕೆಂದು ರೈತರಿಗೆ ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಎಂ.ಎಸ್.ದಿವಾಕರ, ಜಿಪಂ ಸಿಇಒ ಸದಾಶಿವ ಬಿ.ಪ್ರಭು, ಕೂಡ್ಲಿಗಿ ಸಹಾಯಕ ಕೃಷಿ ನಿರ್ದೇಶಕ ಎಂ.ಟಿ.ಸುನಿಲ್ ಕುಮಾರ್, ಕೂಡ್ಲಿಗಿ ತಾಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ವೈ. ರವಿಕುಮಾರ.ಕೃಷಿಕ ಸಮಾಜದ ಮಾಜಿ ಅಧ್ಯಕ್ಷ ಹಾಗೂ ಸದಸ್ಯ ಬಣವಿಕಲ್ಲು ಯರಿಸ್ವಾಮಿ ಸೇರಿ ಕೃಷಿ ಇಲಾಖೆ ಸಿಬ್ಬಂದಿ ಇದ್ದರು.

## ಮಾಧ್ಯಮ ಕ್ಷೇತ್ರಕ್ಕೆ ಬಳ್ಳಾರಿ ಕೊಡುಗೆ ಮಹತ್ವದ್ದು: ಡಾ.ಕರಿಯಪ್ಪ ಮಾಳಿಗಿ

ಬಳ್ಳಾರಿ:–

ಕನ್ನಡದ ಮೊದಲ ಪತ್ರಿಕೆ ಮಂಗಳೂರು ಸಮಾಚಾರ ಮುದ್ರಣಗೊಳ್ಳುತ್ತಿದ್ದು ಬಳ್ಳಾರಿಯಲ್ಲಿ ಹಾಗಾಗಿ ಮಾಧ್ಯಮ ಕ್ಷೇತ್ರಕ್ಕೆ ಬಳ್ಳಾರಿ ಕೊಡುಗೆ ಮಹತ್ವದ್ದು ಎಂದು ಚಿತ್ರದುರ್ಗದ ಉಪನ್ಯಾಸಕ ಡಾ.ಕರಿಯಪ್ಪ ಮಾಳಿಗಿ ಹೇಳಿದ್ದಾರೆ.



ಅವರು ಇಂದು ನಗರದ ಬಿಡಿಎಎ ಸಭಾಂಗಣದಲ್ಲಿ ಜೋಳದರಾಶಿಯ ತಿಮ್ಮಪ್ಪ ಫೌಂಡೇಷನ್ ಹಾಗು ಬಳ್ಳಾ–ರಿಯ ಪತ್ರಿಕಾ ಗೆಳೆಯರು ಆಯೋಜಿಸಿದ್ದ ಪತ್ರಿಕಾ ದಿನಾಚರಣೆ ಮತ್ತು ಸರ್ಕಾರಿ ಶಾಲೆಯಲ್ಲಿ ಓದಿ ಎಸ್ ಎಸ್ ಎಲ್ ಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಸಮಾರಂಭದಲ್ಲಿ ಪತ್ರಿಕಾ ದಿನಾಚರಣೆ ಮತ್ತು ಶಿಕ್ಷಣದ ಮಹತ್ವ ಕುರಿತು ಉಪನ್ಯಾಸ ನೀಡುತ್ತಿದ್ದರು.

ಕನ್ನಡ ಪತ್ರಿಕೋದ್ಯಮದ ಇತಿಹಾಸ ತಿಳಿಸಿ ಇಂದು ಇಂತಹ ಮಾಧ್ಯಮ, ಇಂತಹ ಪಕ್ಷದ್ದು ಎಂಬ ಮಾತುಗಳು ಕೇಳಿಬರುತ್ತಿದೆ. ಇದು ಸಮಾಜಕ್ಕೆ ಧ–ಕ್ಕೆ ತರುವಂತಹುದು. ಅದಕ್ಕಾಗಿ ಪ್ರಜಾ ಪ್ರಭುತ್ವ ವ್ಯವಸ್ಥೆಯಲ್ಲಿ ಮಾಧ್ಯಮಗಳು ಉತ್ತಮ ಸಮಾಜ ಕಟ್ಟಲು ಸಮಾನತೆಯಿಂದ, ಸ್ಪಷ್ಟ ವರದಿಗಳ ಮೂಲಕ ಸಮಾದ ಕನ್ನಡಿಯಾಗಬೇಕು ಎಂದು ಸಲಹೆ ನೀಡಿದರು.

ವಿದ್ಯಾರ್ಥಿಗಳನ್ನು ಉದ್ದೇಶಿಸಿ, ದಿನ ನಿತ್ಯ ಪತ್ರಿಕೆ ಓದಿದವರು ಮಾತ್ರ ಎಂತಹುದೇ ಸಾಮಾನ್ಯ ಪರೀಕ್ಷೆಗಳನ್ನು ಎದಿರಿಸುವ ಬುದ್ದಿಮತ್ತೆ ಪಡೆಯಬಲ್ಲರು ಎಂದರು ಪತ್ರಿಕೆಯನ್ನು ಓದುವುದು ನಿರಂತರವಾಗಿರಬೇಕು ಏಕೆಂದರೆ, ಸಮಾಜದ ಆಗು ಹೋಗುಗಳನ್ನು ಅರಿಯದಿದ್ದರೆ ಇಂದಿನ ಸ್ಪರ್ಧಾ ಯುಗದಲ್ಲಿ ನಾವು ನಮ್ಮ ಬದುಕು ರೂಪಿಸಿಕೊಳ್ಳಲು ಆಗದು ಎಂದರು.

ಚಿತ್ರದುರ್ಗದ ಪತ್ರಕರ್ತ ಚಿಕ್ಕಪ್ಪನಹಳ್ಳಿ ಷಣ್ಮುಖಪ್ಪ ಮಾತನಾಡಿ, ವರದಿಗಾರರಾದವರು ಕೇವಲ ರಾಜಕೀಯ ಸೇರಿದಂತೆ ದಿನನಿತ್ಯದ ವಿಷಯಗಳ ವರದಿಗಾರಿಕೆಗೆ ಸೀಮಿತವಾಗದೆ ಅಭಿವೃದ್ಧಿ ಕುರಿತಾದ ವರದಿಗಳ ಬಗ್ಗೆ ಹೆಚ್ಚು ಹೆಚ್ಚು ಒತ್ತುಕೊಡಬೇಕು ಎಂದರು,

ಶಿವಮೊಗ್ಗದ ಪತ್ರಕರ್ತ ಮಾರ್ಕ್ಸ್ ತೇಜಸ್ವಿ ಮಾತನಾಡಿ, ಸಮಾಜಿಕ ಜಾಲತಾಣದಲ್ಲಿ ಹರಿದಾಡುವ ಫೇಕ್ ನ್ಯುಸ್ ಗಳ ಬಗ್ಗೆ ಮಹತ್ವ ನೀಡಬೇಕಿಲ್ಲ, ಮಹತ್ವದ ವಿಷಯಗಳು ಬಂದಾಗ ಫ್ಯಾಕ್ಟ್ ಚೆಕ್ ಮಾಡಿ ಎಂದರು.

ಕಾರ್ಯಕ್ರಮದಲ್ಲಿ ವಿವಿಧ ಮಠಾಧೀಶರು ಸಾನಿಧ್ಯವಹಿಸಿ ಆಶೀರ್ವ ಚನ ನೀಡಿದರು.

ಎಸ್ಪಿ ರಂಜಿತ್ ಕುಮಾರ್ ಬಂಡಾರು ಅವರು ಕಾರ್ಯಕ್ರಮ ಉದ್ಘಾಟನೆ ಮಾಡಿದರು.

ಮಾಧ್ಯಮ ಕ್ಷೇತ್ರದಲ್ಲಿ ವರದಿಗಾರರು, ಛಾಯಾಗ್ರಾಹಕರು ಮತ್ತು ವಿಡಿಯೋ ಜರ್ನಲಿಸ್ಟ್ ಅವರನ್ನು ಸನ್ಮಾನಿಸಿ ಗೌರವಿಸಲಾಯ್ತು. ಬಳಿಕ ನೂರಕ್ಕೂ ಹೆಚ್ಚು ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯ್ತು.

ಪತ್ರಕರ್ತ ಬಳ್ಳಾರಿಯ ಎಂ.ಅಹಿರಾಜ್, ಹೊನಕೆರೆ ನಂಜುಂಡೇಗೌಡ, ಡಿಡಿಪಿಐ ಉಮಾದೇವಿ ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದರು.

ಜೆಟಿ ಫೌಂಡೇಷನ್ ನ ತಿಮ್ಮಪ್ಪ ಪ್ರಾಸ್ತಾವಿಕವಾಗಿ ಮಾತನಾಡಿ, ಜಾಹಿರಾತು ವಿಭಾಗದ ವ್ಯವಸ್ಥಾಪಕ ನಾಗಿದ್ದ ನಾನು ಈಗ ಹೊರಗಿದ್ದು ಪತ್ರಿಕಾ ದಿನಾಚರಣೆ ಹಮ್ಮಿಕೊಳ್ಳುವುದು ಸೂಕ್ತ ಎಂದು. ಸರ್ಕಾರಿ ಶಾಲೆಯ ವಿದ್ಯಾರ್ಥಿಗಳ ಪ್ರೋತ್ಸಾಹಕ್ಕಾಗಿ ಈ ಸಮಾರಂಭ ಹಮ್ಮಿಕೊಂಡಿದ್ದಾಗಿ ಹೇಳಿದರು.

ಪತ್ರಕರ್ತ ಶಶಿಧರ ಮೇಟಿ ಆಶಯ ನುಡಿ ನುಡಿದರು.

## ವಿದ್ಯಾರ್ಥಿಗಳಿಗೆ ಯೋಗ ಪ್ರಮಾಣ ಪತ್ರ ವಿತರಣೆ

ಸಂಡೂರು:–

ಆರೋಗ್ಯ, ಶಿಕ್ಷಣ ಪ್ರತಿಂಯೋರ್ವರೂ ಈ ಎರಡೂ ಕಡೆ ಗಮನ ನೀಡಿ ನಂತರ ಶಿಸ್ತು ಸಂಪತ್ತು ತಾನಾಗಯೇ ಬರುತ್ತದೆ ಸದೃಢ ಕಾಯರಾಗಲು ಗುಟ್ಕಾ, ಮದ್ಯ ಇವುಗಳ ದುಶ್ಚಟದಿಂದ ದ ಊರವಿರಬೇಕಾಗಿದ್ದು ಇವುಗಳಿಂದ ದೂರವಿರ ಬೇಕಾಗಿರಬೇಕದರೆ ಯೋಗ ಮುಖ್ಯ, ರೋಗ, ರುಜಿನ ಇವುಗಳನ್ನು ತೆಯಬೇಕಧರೆ ಯೋಗ ಮತ್ತು ಆದ್ಯಾತ್ಮ ಚಇಂತನೆ ಪ್ರತಿಯೋರ್ವರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕಾಗಿದೆ.



ನಿರೋಗಿಗಳಾಗಿ ಬಾಳು ಯೋಗ ಬಹಳ ಮುಖ್ಯ, ಯೋಗ ಮಾಡುವುದರ ಜೊತೆಗೆ ನಿರೋಗಿಗಳಾಗಿ ಬಾಳಿ ಉಜ್ವಲ ಭವಿಷ್ಯ ರೂಪಿಸಿಕೊಳ್ಳುವುದು ಉತ್ತಮ, ಯೋಗ ಒಂದೇ ದಿನಕ್ಕೆ ಸೀಮಿತವಾಗಿರದೆ ಪ್ರತಿದಿನವೂ ಬೆಳಿಗ್ಗೆ ಮತ್ತು ಸಂಜೆ ಅರ್ಧಗಂಟೆಗಳ ಕಾಲ ಯೋಗಕ್ಕಾಗಿ ಮೀಸಲಿಡುವುದು ಅವಶ್ಯವಾಗಿದ್ದು ಯೋಗ ಮಾಡುವುದುರಿಂದ ಉತ್ತಮ ಬೆಳವಣಿಗೆ ಸಾಧ್ಯ ಎಂದು ಎಸ್.ಇ.ಎಸ್ ಸಂಸ್ಥೆಯ ಕಾರ್ಯದರ್ಶಿಗಳಾದ ಡಾ॥ ಜಗದೀಶ್ ಬಸಾಪುರರವರು ತಿಳಿಸಿದರು.

ಎಸ್.ಇ.ಎಸ್ ವಿದ್ಯಾಮಂದಿರ ಪದವಿ ಪೂರ್ವ ಕಾಲೇಜಿನಲ್ಲಿ 10ನೇ ಅಂತರಾಷ್ಟ್ರೀಯ ಯೋಗ ಶಿಬಿರದ ಸಮರೋಪ ಸಮಾರಂಭ ಯೋಗ ಶಿಬಿರಾರ್ಥಿಗಳಿಗೆ ಪ್ರಮಾಣ ಪತ್ರವನ್ನು ವಿತರಿಸಿ ಮಾತನಾಡಿದರು. ಅವರು ಮುಂದುವರೆದು ರಾಜಯೋಗ, ಹಠಯೋಗ, ಪ್ರಾಣಯಾಮ, ಧ್ಯಾನ ಸೂರ್ಯನಮಸ್ಕಾರ ಸಿದ್ದಿಯೋಗ, ಯೋಗಗಳಲ್ಲಿ ಹಲವಾರು ಯೋಗಗಳಿವೆ, ನಾವು ಪರಾಣಯಾಮ, ಧ್ಯಾನ ಇವುಗಳಿಗೆ ಮಾತ್ರ ಹೆಚ್ಚಿನ ಅದ್ಯತೆ ನೀಡುತ್ತೇವೆ. ಅದರೆ ಸೂರ್ಯನಮಸ್ಕಾರಕ್ಕೂ ಹೆಚ್ಚಿನ ಪ್ರಧಾನತೆ ನೀಡುವುದು ಅವಶ್ಯ, ಶಿವನಿಗೆ ಹಾಲಿನ ಅಭಿಷೇಕ ಎಷ್ಟು ಪ್ರಾಮುಖ್ಯತೆಯೋ ಹಾಗೆ ಸೂರ್ಯನಮಸ್ಕಾರ ಪ್ರಿಯ ಯೋಗ ಕಾರ್ಯಕ್ರಮದಲ್ಲಿ ಸೂರ್ಯ ನಮಸ್ಕಾರು ಅಷ್ಟೆ ಮುಖ್ಯ ಸೂರ್ಯನಮಸ್ಕಾರಕ್ಕೂ ಹೆಚ್ಚಿನ ಪ್ರಾಮುಖ್ಯತೆಯನ್ನು ನೀಡಬೇಕೆಂದು ವಿದ್ಯರ್ಥಿಗಳಲ್ಲಿ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಯೋಗ ತರಬೇತಿದಾರ ಶ್ರೀನಿವಾಸ ತುಮಟಿಯವರು ಉತ್ತಮ ಜೀವನಕ್ಕೆ ಯೋಗ ತರಬೇತಿ ಅವಶ್ಯಕ ಎಂದು ಹಾಗೂ ಯೋಗ ಮಾಡಿ ನಿರೋಗಿಯಾಗಿ ಎಂದು ಯೋಗದ ಮಹತ್ವವನ್ನು ತಿಳಿಸಿದರು.ಅವಿನಾಶ್ ಕುಮಾರ್ ತ್ಯಾಗಿ. ಪ್ರಸ್ತುತ ಎಸ್.ಆರ್. ಎಸ್ ಪ್ರಾಂಶುಪಾಲಅತಿಥಿಗಳಾಗಿ ಅಗಮಿಸಿದ್ದರು.

## ಕಾನಿಪದಿಂದ ಪವಿತ್ರಾಗೆ ಗೌರವ ಸನ್ಮಾನ

ಬಳ್ಳಾರಿ:–



ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದಿಂದ ನಿನ್ನೆ ಹಾವೇರಿ ನಗರದ ಶ್ರೀ ಗುರುಸಿದ್ದರಾಮೇಶ್ವರ ಕಲ್ಯಾಣ ಮಂಟಪದಲ್ಲಿ ನಡೆದ 2024 ರ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಎಸ್.ಎಸ್. ಎಲ್.ಸಿ. ಪರೀಕ್ಷೆಯಲ್ಲಿ ಹೆಚ್ಚಿನ ಅಂಕ ಪಡೆದ ಪತ್ರಕರ್ತ ದಂಪತಿಗಳ ಕಂಪ್ಲಿ ತಾಲೂಕಿನ ಎಮ್ಮಿಗನೂರು ಗ್ರಾಮದ ಜಿ.ಎಂ.ಪವಿತ್ರಾಗೆ ಸನ್ಮಾನಿಸಿ ಗೌರವಿಸಿ ಪ್ರೋತ್ಸಾಹ ದನ ನೀಡಲಾಗಿದೆ. ಎಮ್ಮಿಗನೂರು ಗ್ರಾಮದ ಬಸಯ್ಯಸ್ವಾಮಿ ಅವರ ಪುತ್ರಿ ಜಿ.ಎಂ.ಪವಿತ್ರ ಎಸ್ ಎಸ್ ಎಲ್ ಸಿಯಲ್ಲಿ ಶೇ 92:5 ಅಂಕ ಪಡೆದಿದ್ದರು. ಈ ವೇಳೆ ಹಾವೇರಿ ಜಿಲ್ಲಾ ಉಸ್ತುವಾರಿ ಸಚಿವ ಶಿವಾನಂದ ಪಾಟೀಲ, ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬೊಮ್ಮಾಯಿ, ರಾಜಾಧ್ಯಕ್ಷ ಶಿವಾನಂದ ತಗಡೂರ್, ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ, ಹಾವೇರಿ ಜಿಲ್ಲಾ ಸಮಿತಿಯವರು, ಪತ್ರಕರ್ತರು, ಪೋಷಕರು ಭಾಗವಹಿಸಿದ್ದರು.

## ಅರಿವಿರದ ಭಯಕ್ಕೆ ಅಂಜಬೇಡಿ

ಕಲಬುರಗಿ:–

"ವರ್ತಮಾನ ಕಾಲದ ಸಮಸ್ಯೆ,ಭಯಗಳು ಇರಲಿ . ಆದರೆ ನಮಗೆ ಗೊತ್ತೇ ಇರದ ಮುಂದೆ ಭವಿಷ್ಯತ್ ಕಾಲೀನದಲ್ಲಿ ಆಗಬಹುದಾದ ಭಯಗಳಿಂದಲೂ ದೇವರು ರಕ್ಷಿಸುತ್ತಾನೆ. ಆದರೆ ಆ ದೇವನಲ್ಲಿ ವಿಶ್ವಾಸವಿರಬೇಕಷ್ಟೆ"ಹೀಗೆಂದು ಪರಮ ಪೂಜ್ಯ ಉತ್ತರಾದಿ ಮಠಾಧೀಶರಾದ ಶ್ರೀಸತ್ಯಾತ್ಮತೀರ್ಥರು ಸಂದೇಶವನ್ನು ನೀಡಿದರು. ಮಳಖೇಡ ಕ್ಷೇತ್ರ ,ಶ್ರೀಮಟ್ಟೀಕಾಕೃತ್ಪಾದರ ಮೂಲವೃಂದಾವನ ಸನ್ನಿಧಾನ ಇಲ್ಲಿ ಶ್ರೀಮದ್ಭಾಗವತ ಸಪ್ತಾಹ ಕಾರ್ಯಕ್ರಮದಲ್ಲಿ ಅನುಗ್ರಹ ಸಂದೇಶ ನೀಡುತ್ತಾ ನಮ್ಮನ್ನು ದೇವರು ಎಲ್ಲಾ ಸ್ಥಳಗಳಿಂದ ರಕ್ಷಿಸಿದ್ದಾನೆ. ಲೋಕದಲ್ಲಿ ವಾಸಿಸುವ ನಮಗೆ ಅಪಾಯ ,ಭಯಗಳು ಹೇಗುಂಟಾಗುತ್ತವೆ ಇದು ತಿಳಿದಿರುವುದಿಲ್ಲ. ಬೇರೆ ಗ್ರಹಗಳಿಂದ, ಸೂರ್ಯ ಕಿರಣಗಳಿಂದ ಇಲ್ಲಿ ವಾತಾವರಣದಲ್ಲಿ ಆಕ್ಸಿಜನ್ ಇಟ್ಟು ರಕ್ಷಿಸಿದ್ದಾನೆ.ಅಷ್ಟೇ ಅಲ್ಲ.ಅವನು "ತ್ರ್ಯಧೀಶಃ". ಎಲ್ಲಾ ಕಾಲಗಳಿಗೂ ಸ್ವಾಮಿಯಾಗಿದ್ದಾನೆ ಆದ್ದರಿಂದ ನಮಗೆ ಗೊತ್ತೇ ಇರದ ಭವಿಷ್ಯತ್ ಕಾಲೀನ ಆಪತ್ತುಗಳಿಂದಲೂ ರಕ್ಷಿಸು ತ್ತಾನೆ. ಒಬ್ಬ ಡಾಕ್ಟರ್ ಬಳಿ ಹೋಗಿ" ನನಗೆ 10ವರ್ಷದ ನಂತರ ಒಂದು ರೋಗ ಯಾವುದು ಬರುತ್ತೋ ಅದಕ್ಕೆ ಔಷಧ ಈಗ ಕೊಡು" ಎಂದರೆ ಅದಕ್ಕೆ ಆ ಡಾಕ್ಟರ್ ಏನೂ ಮಾಡಲಾರ.ನಮ್ಮ ಜೀವನದಲ್ಲಿ ಹಿಂದೆ ನಾವೇನು ಪಾಪ ಕರ್ಮ ಮಾಡಿದ್ದೇವೆಯೋ ಗೊತ್ತಿಲ್ಲ. ಅದಕ್ಕೆ ಶಿಕ್ಷೆಯಾಗಿ ಮುಂದೆ ಯಾವ ಕಾಲದಲ್ಲಿ ಯಾವ ದುಃಖ ಗಂಡಾತರಗಳು ಕಾದಿದೆಯೋ ಗೊತ್ತಿಲ್ಲ.ಆದರೆ ಆ ಭಗವಂತನು " ತ್ರ್ಯಧೀಶಃ" .ನಾವು ಅವನಲ್ಲಿ ಭಕ್ತಿಯಿಂದ ವಿಶ್ವಾಸ ಮಾಡಿದರೆ ಮೂರೂ ಕಾಲಗಳಿಗೂ ನಿಯಾಮಕನಾದ ಅವನು" ಇಂದೇನು" "ಮುಂದೇನು" "ಹಿಂದೇನು". ಎಲ್ಲವನ್ನೂ ತಿಳಿದವ. ಮಾತ್ರವಲ್ಲ. ಅದಕ್ಕೇನು ಉಪಾಯ ಅನ್ನುವುದನ್ನೂ ಶಾಸ್ತ್ರದಲ್ಲಿ ಪರಮಾತ್ಮ ತಿಳಿಸಿಕೊಟ್ಟಿದ್ದಾನೆ. ಅವನ ಸ್ತೋತ್ರ,ಜಪ,ಪಠನ ,ಪಾರಾಯಣ,ಮಹಾತ್ಮರ ಸೇವೆ ಇವೆಲ್ಲವನ್ನೂ ಮಾಡಿದರೆ ಮೂರೂ ಕಾಲದ ಆಪತ್ತನ್ನು ಪರಿಹಾರ ಮಾಡುತ್ತಾನೆ. ಪರಮಾತ್ಮ ಅಂತಹ ದಯಾಲು ಆಗಿದ್ದಾನೆ. ಜೀವನದಲ್ಲಿ ಕಷ್ಟಗಳು ಬಂದಾಗ ನಮ್ಮ ಪ್ರಯತ್ನ ಕೈ ಮೀರಿ ಹೋದಾಗ ಹತಾಶರಾಗದೆ, ಚಿಂತಾಕ್ರಾಂತರಾಗದೆ ,ಅವನಲ್ಲಿ "ಭಕ್ತಿಯಿಂದ ವಿಶ್ವಾಸ ಮಾಡಿ" ಎಂದು ಭಾಗವತ ಸಂದೇಶ ಕೊಟ್ಟಿದೆ ಎಂದು ಶ್ರೀಗಳು ತಿಳಿಸಿದರು.

ಒಂದನೇ ಪುಟದಿಂದ

# ನಟ ಸಲ್ಮಾನ್ ಹತ್ಯೆಗೆ ಸಂಚು

ನಡೆಸಿತು ಎಂದು ಫನ್ವೇಲ್ ಪೊಲೀಸರು ದಾಖಲಿಸಿರುವ ಆರೋಪಿ ಪಟ್ಟಿಯಲ್ಲಿ ಉಲ್ಲೇಖಿಸಿದ್ದಾರೆ.

ಆರೋಪಿಗಳ ಪೈಕಿ ಉತ್ತರ ಪ್ರದೇಶದ ಧನಂಜಯ್ ಅಲಿಯಾಸ್ ಅಜಯ್ ಕಷ್ಯಪ್, ಗುಜರಾತ್‌ನ ಗೌರವ್ ಭಾಟಿಯಾ ಅಲಿಯಾಸ್ ನಹ್ಯೆ ಅಲಿಯಾಸ್, ಸಂದೀಪ್ ಬಿಷ್ಣೋಯ್ ಮಹ್ಮೂದ್ ಖಾನ್ ಅಲಿಯಾಸ್ ವಾಸಿನ್ ಚಿಕ್ನಾ, ಜಿಶನ್ ಜಕ್ರುಲ್ ಅಲಿಯಾಸ್ ಜಾವೇದ್ ಖಾನ್ ಮತ್ತು ಉತ್ತರ ಪ್ರದೇಶದಿಂದ ಬಂಧನಕ್ಕೊಳಗಾಗಿರುವ ದೀಪಲ್ ಹವಾಸಿಂಗ್ ಗೊಗಾಲಿಯ ಆರೋಪಿಗಳು ವಾಟ್ಸಪ್ ಗ್ರೂಪ್ ರಚಿಸಿ ನಟ ಸಲ್ಮಾನ್ ಖಾನ್ ಹತ್ಯೆಗೆ ಅತ್ಯಾಧ್ಯುನಿಕ ಸಶಸ್ತ್ರ ಬಳಸಿದ ಬಗ್ಗೆ ಸಂದೇಶಗಳನ್ನು ಹಂಚಿಕೊಂಡಿದ್ದರು. ಈ ಸಂದೇಶಗಳು ಮತ್ತು ವಾಟ್ಸಪ್ ಕರೆಗಳಲ್ಲಿ ಪಂಜಾಬಿ ಗಾಯಕ ಸಿಧು ಮೂಸೇವಾಲಾ ಹತ್ಯೆಗೆ ಬಳಸಿದ ಸಶಸ್ತ್ರಗಳನ್ನು ಬಳಸಲಾಗುವುದು ಎಂಬ ಅಂಶಗಳನ್ನು ಆರೋಪಿ ಪಟ್ಟಿಯಲ್ಲಿ ಉಲ್ಲೇಖಿಸಲಾಗಿದೆ.

ಏಪ್ರಿಲ್ ತಿಂಗಳಿನಲ್ಲಿ ಬಾಲಿವುಡ್ ನಟ ಸಲ್ಮಾನ್ ಖಾನ್ ಅವರಿಗೆ ಸೇರಿದ ಗ್ಯಾಲಕ್ಸಿ ಅಪಾರ್ಟ್‌ಮೆಂಟ್‌ನಲ್ಲಿ ಗುಂಡಿನ ದಾಳಿ ನಡೆದಿತ್ತು.

## ಮಹಾಂತೇಶ್ ಒಣರೊಟ್ಟಿಯವರಿಂದ ವಿದ್ಯಾರ್ಥಿಗಳಿಗೆ ಉಚಿತ ನೋಟ್ ಬುಕ್ ಮತ್ತು ಜಾಮಿಟ್ರಿ ಬಾಕ್ಸ ವಿತರಣೆ

ದಾವಣಗೆರೆ:–

ನಗರದ ಶತಮಾನದ ಶಾಲೆಯಾದ ಹಳೇಪೇಟೆಯ ಉನ್ನತೀಕರಿಸಿದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಉತ್ತರ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿಗಳಾದ (ಬಿ ಇಒ) ಶೇರ್ ಅಲಿಯವರ ಸಮ್ಮುಖದಲ್ಲಿ ದಾನಿಗಳಾದ ಮಹಾಂತೇಶ್ ಒಣ–ರೊಟ್ಟಿ ಅವರ ಸಹಕಾರದಿಂದ ಶಾಲೆಯ ಎಲ್ಲಾ ವಿದ್ಯಾರ್ಥಿಗಳಿಗೂ ನೋಟ್ ಬುಕ್ ಮತ್ತು ಜಾಮೀಟ್ರಿ ಬಾಕ್ಸಗಳನ್ನು ವಿತರಿಸಲಾಯಿತು. ನೋಟ್ ಬುಕ್ಕ ಮತ್ತು ಜಾಮಿಟ್ರಿ ಬಾಕ್ಸ್ ವಿತರಿಸಿ ಮಾತನಾಡಿದ ಕ್ಷೇತ್ರ ಶಿಕ್ಷಣಾಧಿಕಾರಿ (ಬಿಇಒ) ಶೇರ್ ಅಲಿ ಅವರು ವಿದ್ಯಾರ್ಥಿಗಳು ಶೈಕ್ಷಣಿಕವಾಗಿ ಪ್ರಗತಿ ಸಾಧಿಸ ಬೇಕು ಮತ್ತು ಉನ್ನತ ಹುದ್ದೆಗಳನ್ನು ಪಡೆದು ಆರ್ಥಿಕವಾಗಿ ಸದೃಡರಾಗಿ ನೀವೂ ಕೂಡ ಬಡ ವಿದ್ಯಾರ್ಥಿಗಳಿಗೆ ಸಹಾಯ



ಮಾಡುವ ಬೆಳೆಯಬೇಕು ಎಂದು ಕರೆ ನೀಡಿದರು.

ನೋಟ್ ಬುಕ್ ಮತ್ತು ಜಾಮಿಟ್ರ ಬಾಕ್ಸ್ ದಾನಿಗಳಾದ ಮಹಾಂತೇಶ ಒಣರೊಟ್ಟಿ ಮಾತನಾಡಿ ನಾನು ವಿದ್ಯಾರ್ಥಿ ಜೀವನದಲ್ಲಿ ಕಡು ಬಡತನ, ಹಸಿವಿನ ಸಂಕಷ್ಟಗಳನ್ನು ಎದುರಿಸಿ ವಿದ್ಯಾಭ್ಯಾಸ ಮಾಡಿದ್ದೇನೆ, ಆ ಸಂಕಷ್ಟಗಳನ್ನು ಎದುರಿಸಿ ಆರ್ಥಿಕವಾಗಿ ಸದೃಡನಾಗಿದ್ದು ಹೀಗಾಗಿ ಬಡ ವಿದ್ಯಾರ್ಥಿಗಳಿಗೆ ನಿರಂತರವಾಗಿ ನನ್ನ ಕೈಲಾದಷ್ಟು ಸಹಾಯ ಮಾಡುವ ಮೂಲಕ ಇದರಲ್ಲಿ ಸಂತೃಪ್ತಿ ನೋಡಿದ್ದೇನೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಉತ್ತರ ವಲಯದ ಸಿಇಒ ಶಿವಲೀಲಾ, ದಾವಣಗೆರೆ ಜಿಲ್ಲಾ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಗಳ (ಎಸ್.ಡಿ.ಎಂ.ಸಿ) ಒಕ್ಕೂಟ–ದ ಜಿಲ್ಲಾ ಪತ್ರಿಕಾ ಕಾರ್ಯದರ್ಶಿ ರಮೇಶ್ ಸಿ ದಾಸರ್, ಶಾಲೆಯ ಮುಖ್ಯೋಪಾಧ್ಯಾಯರಾದ ಲೋಕಣ್ಣ ಮಾಡ್ಕೊಂಡ್ರ, ಶಿವಕುಮಾರ್ ತಣಿಗೇರಿ, ಶಾಲೆಯ ಎಸ್.ಡಿ.ಎಂ.ಸಿ, ಅಧ್ಯಕ್ಷ ಕೋಡುಬಾಳ ಚನ್ನಬಸಪ್ಪ ಮಾತನಾಡಿದರು, ಆರಂಭದಲ್ಲಿ ಶಿಕ್ಷಕಿ ಸುಜಾತಾ ಸ್ವಾಗತಿಸಿದರು, ಕಾರ್ಯಕ್ರಮದಲ್ಲಿ ಶಿಕ್ಷಕಿ ಅನಸೂಯಮ್ಮ ಆರ್,ಸಿ, ನಿರೂಪಣೆ ಮಾಡಿದರು, ಶಿಕ್ಷಕಿ



ಸಂಪತ್ತು ಕುಮಾರಿ ವಂದನಾರ್ಪಣೆ ಮಾಡಿದೆರು, ಈ ಸಂದರ್ಭದಲ್ಲಿ ಶಿಕ್ಷಕಿಂ–ಯರಾದ ಜಯಶ್ರೀ, ಶಿಲ್ಪಾ, ರೂಪಾ, ವಿದ್ಯಾರ್ಥಿಗಳು ಉಪಸ್ಥಿತರಿದ್ದರು ಎಂದು ರಮೇಶ್ ಸಿ ದಾಸರ್, ಜಿಲ್ಲಾ ಪತ್ರಿಕಾ ಕಾರ್ಯದರ್ಶಿ, ದಾವಣಗೆರೆ ಜಿಲ್ಲಾ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಗಳ (ಎಸ್.ಡಿ.ಎಂ.ಸಿ)ಒಕ್ಕೂಟ, ದಾವಣಗೆರೆ ಜಿಲ್ಲೆ, ದಾವಣಗೆರೆ ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹೊಸ ಅಪರಾಧ ಕಾನೂನುಗಳ ಬಗ್ಗೆ ಕಾರ್ಯಾಗಾರ



ದಾವಣಗೆರೆ:–

ಭಾರತೀಯ ನ್ಯಾಯ ಸಂಹಿತೆ ಸೇರಿ 3 ಹೊಸ ಅಪರಾಧ ಕಾನೂನುಗಳ ಬಗ್ಗೆ ಕಳೆದೊಂದು ತಿಂಗಳಿನಿಂದಲೂ ನಗರ, ಜಿಲ್ಲೆಯ ಪೊಲೀಸ್ ಅಧಿಕಾರಿ, ಸಿಬ್ಬಂದಿಗಳಿಗೆ ಕಾರ್ಯಾಗಾರ, ಸಂವಾದದ ಮೂಲಕ ಅರಿವು ಮೂಡಿಸಲಾಗಿದೆ. ಭಾರತೀಯ ನ್ಯಾಯ ಸಂಹಿತಾ ಅಥವಾ ಬಿಎನ್‌ಎಸ್, ಭಾರತೀಯ ನಾಗರೀಕ ಸುರಕ್ಷಾ ಸಂಹಿತಾ ಅಥವಾ ಬಿಎನ್‌ಎಸ್‌ಎಸ್, ಮತ್ತು ಭಾರತೀಯ ಸಾಕ್ಷ್ಯ ಅಧಿನಿಯಮ ಅಥವಾ ಬಿಎನ್‌ಎಸ್ ಹೊಸದಾಗಿ ಜಾರಿಗೊಂಡ ಕ್ರಿಮಿನಲ್ ಕಾನೂನುಗಳ ಬಗ್ಗೆ ಮಾರ್ಗದರ್ಶನ ನೀಡಲಾಗಿತ್ತು.ಅಲ್ಲದೇ, ಭಾರತೀಯ ದಂಡ ಸಂಹಿತೆ ಅಥವಾ ಐಪಿಸಿ, ಕ್ರಿಮಿನಲ್ ಪ್ರೊಸೀಜರ್ ಕೋಡ್ ಅಥವಾ ಸಿಆರ್ಪಿಸಿ ಮತ್ತು 1872ರ ಭಾರತೀಯ ಸಾಕ್ಷ್ಯ ಕಾಯ್ದೆಯ ಸ್ಥಾನ ತುಂಬಲಿವೆ. ಬಿಎನ್‌ಎಸ್ 163 ವರ್ಷ ಹಳೆಯ ಐಪಿಸಿಯ ಜಾಗ ತುಂಬಲಿದೆ. ಇದು ಅಪರಾಧ ಕಾನೂನಿನಲ್ಲಿ ಬಹಳಷ್ಟು ಬದಲಾವಣೆ ತರಲಿದೆ. ಬಿಎನ್‌ಎಸ್ ಸೆಕ್ಷನ್ 4 ರ ಪ್ರಕಾರ ಶಿಕ್ಷೆ ರೂಪವಾಗಿ ಸಮುದಾಯ ಸೇವೆಯನ್ನು ಪರಿಚಯಿಸಲಾಗುತ್ತಿದೆ.ಲೈಂಗಿಕ ಅಪರಾಧ ಎಸಗಿದವರ ವಿರುದ್ಧ ಕಠಿಣ ಶಿಕ್ಷೆಯನ್ನು ಹೊಸ ಕಾನೂನು ವಿಧಿಸುವುದಕ್ಕೆ ಅವಕಾಶ ನೀಡಿದೆ. ಮದುವೆ ಉದ್ದೇಶವಿಲ್ಲದೇ ಲೈಂಗಿಕ ಆಸೆ ಪೂರೈಸಲು ಮೋಸ ಮಾಡಿ, ವಂಚಿಸಿ ಲೈಂಗಿಕ ದೌರ್ಜನ್ಯವೆಸಗಿದರೆ ಅಂತಹ ಅಪರಾಧಿಗಳಿಗೆ 10 ವರ್ಷ ಜೈಲು ಶಿಕ್ಷೆ ಮತ್ತು ದಂಡ ವಿಧಿಸಬಹುದು. ಉದ್ಯೋಗ, ಬಡ್ತಿ ಅಥವಾ ಮದುವೆಗೆ ಸಂಬಂಧಿಸಿದ ಸುಳ್ಳು ಭರವಸೆಗಳನ್ನು ಒಬ್ಬರ ಗುರುತನ್ನು ಮರೆಮಾಚಿ ವಂಚಿಸಿದರೆ ಅದಕ್ಕೂ ಹೊಸ ಕಾನೂನು ಶಿಕ್ಷೆ ವಿಧಿಸುವುದನ್ನು ಉಲ್ಲೇಖಿಸಿದೆ.ಇದು ಕಾನೂನುಬಾಹಿರ ಚಟುವಟಿಕೆಗಳ ವಿಶಾಲ ವ್ಯಾಪ್ತಿ ಒಳಗೊಂಡಿದೆ. ಕಾನೂನುಬಾಹಿರ ವಿಧಾನಗಳ ಮೂಲಕ ಕಾರ್ಯಗತಗೊಳಿಸಲಾದ ಅಪರಾಧಗಳಿಗೆ ಕಠಿಣ ಶಿಕ್ಷೆ ನೀಡುವುದಕ್ಕೆ ಅವಕಾಶ ಇದೆ.

ರಾಷ್ಟ್ರೀಯ ಭದ್ರತೆಗೆ ಬೆದರಿಕೆಯೊಡ್ಡುವ ಕೃತ್ಯಗಳಿಗೆ, ಜನರಲ್ಲಿ ಭಯೋತ್ಪಾದನೆ ಹೊಡೆದೋಡಿಸುವ ಉದ್ದೇಶದಿಂದ ಭಾರತದ ಏಕತೆ, ಸಮಗ್ರತೆ, ಸಾರ್ವಭೌಮತ್ವ ಅಥವಾ ಆರ್ಥಿಕ ಭದ್ರತೆಗೆ ಬೆದರಿಕೆ ಹಾಕುವ ಯಾವುದೇ ಚಟುವಟಿಕೆ ಎಂದು ಭಯೋತ್ಪಾದಕ ಕೃತ್ಯವನ್ನು ಬಿಎನ್‌ಎಸ್ ವ್ಯಾಖ್ಯಾನಿಸುತ್ತದೆ. ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ ಈವರೆಗೆ ಚಾಲ್ತಿಯಲ್ಲಿದ್ದ ಹಳೆಯ 1973ರ ಕ್ರಿಮಿನಲ್ ಪ್ರೊಸೀಜರ್ ಕೋಡ್ (ಸಿಆರ್ಪಿಸಿ) ಜಾಗದಲ್ಲಿ ಭಾರತೀಯ ನಾಗರಿಕ ಸುರಕ್ಷಾ ಸಂಹಿತಾ ಜಾರಿಗೆ ಬರುತ್ತಿದೆ. ಇದರಲ್ಲಿ, ವಿಚಾರಣಾಧೀನ ಕೈದಿಗಳಿಗೆ ಅಂದರೆ, ಜೀವಾವಧಿ ಶಿಕ್ಷೆ ಅಥವಾ ಬಹು ಆರೋಪ ಹೊಂದಿರುವ ಪ್ರಕರಣ ಹೊರತುಪಡಿಸಿ, ಮೊದಲ ಬಾರಿಗೆ ಸೆರೆವಾಸ ಅನುಭವಿಸುತ್ತಿರುವ ಅಪರಾಧಿಗಳು ತಮ್ಮ ಗರಿಷ್ಠ ಶಿಕ್ಷೆಯ 3ನೇ ಒಂದು ಭಾಗದಷ್ಟು ಶಿಕ್ಷೆ ಪೂರೈಸಿದ ನಂತರ ಜಾಮೀನು ಪಡೆಯಲು ಅವಕಾಶ ಮಾಡಿಕೊಡುತ್ತದೆ. ಆ ಮೂಲಕ ಕಡ್ಡಾಯ ಜಾಮೀನು ಪಡೆಯಲು ಮಾನದಂಡ ನಿಗದಿ ಮಾಡಿದೆ.

ಈಗ ಕನಿಷ್ಟ 7 ವರ್ಷ ಜೈಲು ಶಿಕ್ಷೆಗೆ ಗುರಿಯಾಗುವ ಅಪರಾಧಗಳಿಗೆ ಫೋರೆನ್ಸಿಕ್ ತನಿಖೆ ಕಡ್ಡಾಯವಾಗಿದೆ. ಫೋರೆನ್ಸಿಕ್ ತಜ್ಞರು ಅಪರಾಧದ ಸ್ಥಳಗಳಿಂದ ಸಾಕ್ಷ್ಯ ಸಂಗ್ರಹಿಸುತ್ತಾರೆ, ದಾಖ ಲಿಸುತ್ತಾರೆ. ಈ ಸಾಕ್ಷ್ಯ ಸಂಗ್ರಹ ಖಚಿತಪಡಿಸಿಕೊಳ್ಳಲಾಗುತ್ತದೆ. ಯಾವುದೇ ಒಂದು ರಾಜ್ಯವು ವಿಧಿವಿಜ್ಞಾನ ಸೌಲಭ್ಯ ಹೊಂದಿಲ್ಲದಿದ್ದರೆ, ಅದು ಇನ್ನೊಂದು ರಾಜ್ಯದಲ್ಲಿ ಸೌಲಭ್ಯ ಬಳಸುತ್ತದೆ.

ಭಾರತೀಯ ಸಾಕ್ಷ್ಯ ಅಧಿನಿಯಮವು ಈವರೆಗ ಚಾಲ್ತಿಯಲ್ಲಿದ್ದ ಭಾರತೀಯ ಸಾಕ್ಷ್ಯ ಕಾಯ್ದೆ ಜಾಗವನ್ನು ಹೊಸ ಅಪರಾಧ ಕಾನೂನು ಆಗಿರುವ ಭಾರತೀಯ ಸಾಕ್ಷ್ಯ ಅಧಿನಿಯಮ ಭರ್ತಿಮಾಡಲಿದೆ.

ಇದು ಎಲೆಕ್ಟ್ರಾನಿಕ್ಸ್ ಪುರಾವೆಗಳಿಗೆ ಸಂಬಂಧಿಸಿ ನಿರ್ಣಾಯಕ ಅಪ್ಡೇಟ್ಸ್ ಹೊಂದಿದೆ.

ಹೊಸ ಕಾನೂನು ಎಲೆಕ್ಟ್ರಾನಿಕ್ ಪುರಾವೆಗಳ ಮೇಲಿನ ನಿಯಮಗಳನ್ನು ಸುವ್ಯವಸ್ಥಿತಗೊಳಿಸುತ್ತದೆ.

ಮೂರೂ ಹೊಸ ಕಾನೂನುಗಳ ಜಾರಿಗಾಗಿ ಕಳೆದ ಒಂದು ತಿಂಗಳಿಂದ ಜಿಲ್ಲೆಯ ಎಲ್ಲಾ ಪೊಲೀಸ್ ಅಧಿಕಾರಿ ಸಿಬ್ಬಂದಿಗಳಿಗೆ ಜಿಲ್ಲಾ ಪೊಲೀಸ್ ವತಿಯಿಂದ ಹಲವು ಕಾರ್ಯಾಕ್ರಮಗಳನ್ನು ಹಮ್ಮಿಕೊಳ್ಳಲಾಗಿತ್ತು.

ಜಿಲ್ಲಾ ಮಟ್ಟದಲ್ಲಿ, ಉಪ ವಿಭಾಗ, ಪೊಲೀಸ್ ವೃತ್ತ ವ್ಯಾಪ್ತಿಯಲ್ಲಿ ಹಾಗೂ ಪೊಲೀಸ್ ಠಾಣಾ ಮಟ್ಟದಲ್ಲಿ ಅಧಿಕಾರಿ, ಸಿಬ್ಬಂದಿಗೆ ಹೊಸ ಕಾನೂನುಗಳ ಬಗ್ಗೆ ಅರಿವು ಮೂಡಿಸಲು ಹಿರಿಯ ಅಧಿಕಾರಿಗಳು, ಕಾನೂನು ತಜ್ಞರು, ಕಾನೂನು ಅಧಿಕಾರಿಗಳ ಸಹಯೋಗದಲ್ಲಿ ಹೊಸ ಕಾನೂನು ಜಾರಿಯ ಬಗ್ಗೆ ಹಲವು ಕಾರ್ಯಾಗಾರ, ತರಬೇತಿ, ಆನ್ ಲೈನ್ ತರಬೇತಿ ಹಮ್ಮಿಕೊಳ್ಳಲಾಗಿತ್ತು ಅಲ್ಲದೇ ಪೊಲೀಸ್ ಅಧಿಕಾರಿ ಸಿಬ್ಬಂದಿಗಳಿಗೆ ಹೊಸ ಕಾನೂನುಗಳ ಬಗ್ಗೆ ಪರೀಕ್ಷೆಗಳನ್ನು ಹಮ್ಮಿಕೊಳ್ಳಲಾಗಿತ್ತು.

ಹಳೆಯ ಭಾರತೀಯ ದಂಡ ಸಂಹಿತೆ ಅಥವಾ ಐಪಿಸಿ, ಕ್ರಿಮಿನಲ್ ಪ್ರೊಸೀಜರ್ ಕೋಡ್ ಅಥವಾ ಸಿಆರ್ಪಿಸಿ ಮತ್ತು 1872ರ ಭಾರತೀಯ ಸಾಕ್ಷ್ಯ ಕಾಯ್ದೆಯ ನಿಯಮಗಳ ಬದಲಿಗೆ ನೂತನ ಭಾರತೀಯ ನ್ಯಾಯ ಸಂಹಿತಾ, ಭಾರತೀಯ ನಾಗರಿಕ ಸುರಕ್ಷಾ ಸಂಹಿತಾ, ಭಾರತೀಯ ಸಾಕ್ಷ್ಯ ಅಧಿನಿಯಮ ಜಾರಿಗೆ ಹಾಗೂ ದೈನಂದಿನ ಪ್ರಕರಣಗಳ ದಾಖಲು, ತನಿಖೆ ಹಾಗೂ ಇತರೆ ಕಾರ್ಯಗಳಲ್ಲಿ ಜಾರಿಗೆ, ಅಳವಡಿಕೆಗೆ ಪೂರ್ಣ ಸಿದ್ದತೆ ಮಾಡಿಕೊಂಡಿತ್ತು. ರಾಜ್ಯದಲ್ಲಿ ಪೊಲೀಸ್ ಇಲಾಖೆ ಉನ್ನತಿಕರಿಸುವ ಹಿನ್ನೆಲೆಯಲ್ಲಿ ಹಲವು ಸುಧಾರಣೆ ತಂದಿದ್ದು, ಅದರಲ್ಲಿ ಸೈಬರ್ ಅಪರಾಧಗಳಿಗೆ ಸಂಬಂಧಿಸಿದಂತೆ ಉನ್ನತ ತಾಂತ್ರಿಕತೆ ಬಳಕೆ, ವಿಧಿವಿಜ್ಞಾನ ಪ್ರಯೋಗಾಲಯಗಳ ಸ್ಥಾಪನೆ, ಪೊಲೀಸ್ ಆಡಳಿತ ವ್ಯವಸ್ಥೆಯ ಪೊಲೀಸ್ ಐಟಿ ಉನ್ನತಿಸಕರಿಸಿದ್ದು, ಹೊಸ ಕಾನೂನು ಜಾರಿಗೆ ಅನೂಕೂಲಕ್ಕಾಗಿ ಪೊಲೀಸ್ ಐಟಿ 2.0 ಜಾರಿ ಮಾಡಿದ್ದು, ಸಾರ್ವಜನಿಕರಿಗೆ ನ್ಯಾಯಸಮ್ಮತ, ತುರ್ತು ನ್ಯಾಯ ನೀಡಲು ಅನೂಕೂಲವಾಗುವಂತೆ ಹಲವು ಮಾರ್ಪಾಡು ಮಾಡಿದೆ.

ಸೀನ್ ಆಫ್ ಕ್ರೈಂ(ಖಔಅಔ) ಅಫೀಸರ್ಸ್‌ಗಳನ್ನು ನೇಮಕ ಮಾಡಿದ್ದು, ಜಿಲ್ಲೆಯಲ್ಲಿ ನುರಿತ ತಜ್ಞ ಸೀನ್ ಆಫ್ ಕ್ರೈಂ ಅಧಿಕಾರಿಗಳು ಪ್ರತಿ ಕ್ರೈಂ ಘಟನಾ ಸ್ಥಳಕ್ಕೆ ತೆರಳಿ ಸುಧಾರಿತ ಉಪಕರಣಗಳ ಮೂಲಕ ಪ್ರತಿ ಪ್ರಕರಣಗಳಲ್ಲೂ ಬಹು ಎಚ್ಚರಿಕೆ ವಹಿಸಿ, ಪ್ರಕರಣ–ಕ್ಕೆ ಸಂಬಂಧಿಸಿದಂತೆ ಸಾಕ್ಷ್ಯಗಳನ್ನು ಸಂಗ್ರಹಿಸುತ್ತಾರೆ.

ಜಿಲ್ಲೆಯಲ್ಲಿ ಸೈಬರ್ ಅಪರಾಧಗಳ ತನಿಖೆಗಾಗಿ ಸಿಇಎನ್ ಪೊಲೀಸ್ ಠಾಣೆ ತೆರೆದಿದ್ದು, ಡಿವೈಎಸ್ಪಿ ದರ್ಜೆ ಅಧಿಕಾರಿಯನ್ನು ಸಿಇಎನ್ ಪೊಲೀಸ್ ಠಾಣೆ ಅಧಿಕಾರಿಯಾಗಿ ನೇಮಿಸಲಾಗಿದೆ. ಸಾರ್ವಜನಿಕ ಸೇವೆಗೆ, ಹೊಸ ಕಾನೂನುಗಳ ಅಳವಡಿಕೆ, ಜಾರಿ ಯಲ್ಲಿ ಜಿಲ್ಲಾ ಪೊಲೀಸ್ ಸನ್ನದ್ಧವಾಗಿ, ಹೊಸ ಕಾನೂನುಗಳ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವಲ್ಲಿ ಕಾರ್ಯೋನ್ಮುಖವಾಗಿದೆ.

## ಸೀರೆತೊಟ್ಟು ವಿಜೃಂಭಿಸಿದ ಕಾಲೇಜು ವಿದ್ಯಾರ್ಥಿನಿಯರು



ದಾವಣಗೆರೆ:–

ನಗರದ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನಲ್ಲಿ. ಸದಾ ಓದು, ಕ್ಲಾಸು ಎಂದು ಬಿಜಿಯಾಗಿದ್ದ ವಿದ್ಯಾರ್ಥಿನಿಯರಿಂದು ರಿಲ್ಯಾಕ್ಸ್ ಮೂಡಿಗೆ ಜಾರಿದ್ದು, ಕುಣಿದು ಕುಪ್ಪಳಿಸಿದರು. ಪ್ರತಿನಿತ್ಯ ಸಮವಸ್ತ್ರದಲ್ಲಿ ಕಾಲೇಜಿಗೆ ಆಗಮಿಸುತ್ತಿದ್ದ ವಿದ್ಯಾರ್ಥಿನಿಯರು ಸೀರೆತೊಟ್ಟು ಕಂಗೊಳಿಸಿದರಲ್ಲದೇ ಸೆಲ್ಫಿ ಕ್ಲಿಕ್ಕಿಸಿಕೊಂಡು ಸಂಭ್ರಮಿಸಿದರು.

ಸರ್ಕಾರಿ ಕಾಲೇಜಿನಲ್ಲಿ ಇದೇ ಪ್ರಥಮ ಬಾರಿಗೆ ಎಥ್ನಿಕ್ ಡೇ ಆಯೋಜನೆ ಮಾಡಿದ್ದು ಇದರಿಂದ ವಿದ್ಯಾರ್ಥಿಗಳಲ್ಲಿನ ಪ್ರತಿಭೆ ಅನಾವರಣಕ್ಕೆ ಅನುಕೂಲವಾಗಲಿದೆ ಪ್ರಾಂಶುಪಾಲರು ಮಂಜುನಾಥ್, ತಿಳಿಸಿದರು. ವಿದ್ಯಾರ್ಥಿನಿಯರೊಂದಿಗೆ ಶಿಕ್ಷಕರು ಕೂಡ ಹೆಜ್ಜೆ ಹಾಕಿ ಸಂಭ್ರಮಿಸಿದರು.

ಇದೇ ಮೊದಲ ಬಾರಿಗೆ ಸರ್ಕಾರಿ ಕಾಲೇಜಿನಲ್ಲಿ ಎಥ್ನಿಕ್ ಡೇ ಆಯೋಜನೆ ಮಾಡಿದ್ದು ವಿದ್ಯಾರ್ಥಿನಿಯರು ಸಖತ್ ಎಂಜಾಯ್ ಮಾಡಿದರು.

ಈ ರೀತಿ ಕಾರ್ಯಕ್ರಮ ಆಯೋಜನೆ ಮಾಡುವುದರಿಂದ ಮನಸ್ಸು ರಿಲ್ಯಾಕ್ಸ್ ಆಗತ್ತದೆ ಅಲ್ಲದೇ ನಮ್ಮ ಕಲೆ ಸಂಸ್ಕೃತಿಯನ್ನು ಉಳಿಸುವ ನಿಟ್ಟಿನಲ್ಲಿ ಹಾಗೂ ಅದರ ಮಹತ್ವ ಸಾರುವ ನಿಟ್ಟಿನಲ್ಲಿ ಅನುಕೂಲವಾಗಿದೆ ಎಂದರು.

## ಏಷ್ಯನ್ ಗೇಮ್ಸ್‌ನಲ್ಲಿ ಯೋಗಕ್ಕೆ ಗ್ರೀನ್ ಸಿಗ್ನಲ್

ಹೊಸದಿಲ್ಲಿ:–

ಪ್ರತಿಷ್ಠಿತ ಏಷ್ಯನ್ ಗೇಮ್ಸ್ ಕ್ರೀಡಾಕೂಟದಲ್ಲಿ ಯೋಗವನ್ನು ಸ್ಪರ್ಧಾತ್ಮಕ ಕ್ರೀಡೆಯನ್ನಾಗಿ ಸೇರಿಸಲು ಏಷ್ಯಾ ಕಾರ್ಯನಿರ್ವಹಕರ ಮಂಡಳಿ ಒಪ್ಪಿಗೆ ನೀಡಿದೆ ಎಂದು ಭಾರತ ಒಲಿಂಪಿಕ್ ಅಸೋಸಿಯೇಷನ್ ಅಧ್ಯಕ್ಷೆ ಪಿ.ಟಿ. ಉಷಾ ತಿಳಿಸಿದ್ದಾರೆ. ಇದರೊಂದಿಗೆ ಒಲಿಂಪಿಕ್ ಕೌನ್ಸಿಲ್ ಆ್ ಏಷ್ಯಾ ಒಸಿಎ ಸಾಮಾನ್ಯ ಸಭೆಯಲ್ಲಿ ಅನುಮೋದನೆ ಸಿಗುವ ಬಗ್ಗೆ ಖಚಿತಪಡಿಸಿದ್ದಾರೆ. ಕಾರ್ಯನಿರ್ವಹಕರ ನಿರ್ಧಾರವನ್ನು ಒಲಿಂಪಿಕ್ ಕೌನ್ಸಿಲ್ ಆಫ್ ಏಷ್ಯಾಹಂಗಾಮಿ ಅಧ್ಯಕ್ಷ ರಣೀರ್ ಸಿಂಗ್ ತಮಗೆ ತಿಳಿಸಿರುವುದಾಗಿ ಪಿ.ಟಿ. ಉಷಾ ಹೇಳಿದ್ದಾರೆ. ಕಾರ್ಯನಿರ್ವಹಕರ ದೃಢವಾದ ಬೆಂಬಲಕ್ಕೆ ಪಿ.ಟಿ. ಉಷಾ ಧನ್ಯವಾದ ತಿಳಿಸಿದ್ದಾರೆ. ಒಸಿಎ ಕಾರ್ಯನಿರ್ವಹರ ನಿರ್ಧಾರಕ್ಕೆ ನನಗೆ ಸಂತಸ ನೀಡಿದೆ. ಯೋಗ–ಕ್ಕೆ ಮಾನ್ಯತೆ ನೀಡಬೇಕೆನ್ನುವ ಭಾರತದ ಮನವಿಗೆ ಮನ್ನಣೆ ನೀಡಿದೆ. ಇದೀಗ ಶಫಾರಸ್ಸು ಕ್ರೀಡಾ ಸಮಿತಿಯಿಂದ ಸಾಮಾನ್ಯ ಸಭೆಗೆ ಅನಮೋದನೆಗೆ ಹೋಗಲಿದೆ ಎಂದು ಮಾಜಿ ಅಥ್ಲೀಟ್ ತಿಳಿಸಿದ್ದಾರೆ. ಹಲವಾರಿ ಕ್ರೀಡೆಗಳನ್ನೊಳಗೊಂಡ ಕ್ರೀಡಾಕೂಟಕ್ಕೆ ಯೋಗವನ್ನು ಸೇರ್ಪಡೆಗೊಳಿಸುತ್ತಿರುವುದು ಇದು ಮೊದಲ ಹೆಜ್ಜೆಯಾಗಿದೆ ಎಂದು ಅಂತಾರಾಷ್ಟ್ರೀಯ ಒಲಿಂಪಿಕ್ಸ್ ಅಸೊಸಿಯೇಷನ್ ಹೇಳಿದೆ.

## ಶರಣ ಸಾಹಿತ್ಯ ಕ್ಷೇತ್ರದಲ್ಲಿ ಬಹುದೊಡ್ಡ ಕೊಡುಗೆ: ಹೆಚ್ಚುವರಿ ಎಸ್ಪಿ ಡಾ.ಶಿವಕುಮಾರ್

ರಾಯಚೂರು:–

ಡಾ.ಫ.ಗು.ಹಳಕಟ್ಟಿ ಅವರು ವಚನಗಳ ಹಸ್ತ ಪ್ರತಿಗಳನ್ನು ಸಂಗ್ರಹಿಸಿ, ಪ್ರಕಟಿಸಿ, ಶರಣ ಸಾಹಿತ್ಯ ಕ್ಷೇತ್ರದಲ್ಲಿ ಬಹುದೊಡ್ಡ ಕೊಡುಗೆಯನ್ನು ನೀಡಿದ್ದಾರೆ ಎಂದು ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠ ಅಧಿಕಾರಿ ಡಾ.ಶಿವಕುಮಾರ್ ಅವರು ಹೇಳಿದರು. ಅವರು ನಗರದ ಪಂಡಿತ್ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ನಗರಸಭೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಡಾ.ಫ.ಗು.ಹಳಕಟ್ಟಿಯವರ ಜನ್ಮ ದಿನದ ಅಂಗವಾಗಿ ವಚನ ಸಾಹಿತ್ಯ ಸಂರಕ್ಷಣಾ ದಿನಾಚರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ, ಮಾತನಾಡಿದರು.

ಸರಳ, ಸಜ್ಜನಿಕೆ, ಕ್ರಿಯಾಶೀಲತೆ, ವಿಶೇಷ ಆಸಕ್ತಿ, ಪರಿಶ್ರಮ ಮತ್ತು ಕನ್ನಡ ನಾಡು, ನುಡಿ, ಹಾಗೂ ಸಾಹಿತ್ಯದ ಬಗ್ಗೆ ಅವರಿಗೆ ವಿಶೇಷ ಕಾಳಜಿ, ಪ್ರೀತಿ ಇದ್ದದ್ದನ್ನು ಗಮನಿಸಬಹುದು. ಅವರಲ್ಲಿಯ ಶಿಸ್ತು, ಶ್ರದ್ದೆ, ಮಾಡುವ ಕೆಲಸದಲ್ಲಿನ ನಿಷ್ಠೆಯಿಂದಾಗಿ ವಚನ ಸಾಹಿತ್ಯ ಸಂಗ್ರಹಕ್ಕೆ ಅವರು ಮಾಡಿದ ಸಾಹಸ ಪೂರ್ಣಕಾರ್ಯ ಶ್ಲಾಘನೀಯ ಹಾಗೂ ಸ್ಮರಣೀಯವಾಗಿದೆ ಎಂದರು. ಹಸ್ತಪ್ರತಿಗಳು ಪ್ರಕಟಣೆಗ–ಂದೇ 'ಶಿವಾನುಭವ' ಪತ್ರಿಕೆಯನ್ನು 1926ರಲ್ಲಿ ಪ್ರಾರಂಭಿಸಿದರು. ಈ ಮಾಸ ಪತ್ರಿಕೆ 35ವರ್ಷಗಳ ಕಾಲ ನಿರಂತರ ನಡೆಸಿದ ಕನ್ನಡ ಪತ್ರಿಕೆ ಎಂಬ ಹೆಗ್ಗಳಿಕೆಗೆ ಪಾತ್ರವಾಯಿತು.




1927ರಲ್ಲಿ 'ನವಕರ್ನಾಟಕ' ವಾರ ಪತ್ರಿಕೆ ಆರಂಭಿಸಿದರು. ಈ ಎರಡು ಪತ್ರಿಕೆ ಸಂಪಾದಕ, ಮುದ್ರಿಕೆ ಫ.ಗು. ಹಳಕಟ್ಟಿಯವರೇ ಆಗಿದ್ದಾರೆ ಎಂದು ಹೇಳಿದರು. ಈ ವೇಳೆ ರಾಯಚೂರು ಸಹಾಯಕ ಆಯುಕ್ತರಾದ ಮೈಬೂಬಿ ಅವರು ಮಾತನಾಡಿ, ಫ.ಗು. ಹಳಕಟ್ಟಿ ಅವರು ಕರ್ನಾಟಕದ ಮ್ಯಾಕ್ಸ್‌ಮುಲ್ಲರ್ ಎಂಬ ಕೀರ್ತಿಗೆ ಭಾಜನರಾದರು. ಶರಣರ ವಚನ ಸಾಹಿತ್ಯವನ್ನು ಸಂಗ್ರಹಿಸಿ, ಸಂಪಾದಿಸಿ ಪ್ರಕಟಿಸಿ ಸಂಶೋಧನಾ ಕ್ಷೇತ್ರ–ಕ್ಕೆ ದೊಡ್ಡ ಕೊಡುಗೆ ನೀಡಿದ್ದಾ–ರೆ ಎಂದರು. ಇಂದಿನ ಮಕ್ಕಳಲ್ಲಿ ಇಂಗ್ಲಿಷ್ ಶಿಕ್ಷಣದ ವ್ಯಾಮೋಹ ದಿಂದ ಕನ್ನಡ ಸಾಹಿತ್ಯ ಓದಲು ಹಿಂಜ–ರಿಯುತ್ತಿದ್ದು, ವಿದ್ಯಾರ್ಥಿಗಳು ಕನ್ನಡ ಸಾಹಿತ್ಯವನ್ನು ಹೆಚ್ಚಾಗಿ ಓದಿ ಕನ್ನಡ ಸಾಹಿತ್ಯವನ್ನು ಬೆಳೆಸಿ, ಫ.ಗು.ಹಳಕಟ್ಟಿ ಅವರ ಜೀವನದ ಆದರ್ಶಗಳನ್ನು ಪ್ರತಿಯೊಬ್ಬರು ಪಾಲಿಸಬೇಕೆಂದರು. ಉಪನ್ಯಾಸಕರಾಗಿ ಹಿರಿಯ ಸಾಹಿತಿ ವೀರಹನುಮಾನ್ ಅವರು ಮಾತನಾಡಿ, ವಚನ ಸಾಹಿತ್ಯ ಮತ್ತು ಪತ್ರಿಕೋದ್ಯಮದ ಜೊತೆಗೆ ಸಂಘಟನೆ, ಬ್ಯಾಂಕಿಂಗ್, ಕೃಷಿ, ನೇಕಾರಿಕೆ, ಸಹಕಾರಿ ಹೀಗೆ ಎಲ್ಲದರಲ್ಲಿಯೂ ತಮ್ಮನ್ನು ತೊಡಗಿಸಿಕೊಂಡರು. 1910 ದಿಲ್ಲಿ ಬಿಜಾಪುರ ಜಿಲ್ಲಾ ಲಿಂಗಾಯತ ವಿದ್ಯಾವರ್ಧಕ ಸಂಘ (ಬಿ.ಎಲ್.ಡಿ.ಇ.). 1912ರಲ್ಲಿ ಶ್ರೀಸಿದ್ದೇಶ್ವರ ಅರ್ಬನ್ ಕೋ.. ಆಪರೇಟಿವ್ ಬ್ಯಾಂಕು, ಗ್ರಾಮೀಣ ಅಭಿವೃದ್ಧಿ ಸಂಘ, ಒಕ್ಕಲುತನ ಸಹಕಾರಿ ಸಂಘ, ನೇಕಾರರ ಸಂಘ, ಹತ್ತಿ ಮಾರಾಟಗಾರರು ಸಂಘ, ಸಹಕಾರ ಸಂಘಗಳನ್ನು ಸ್ಥಾಪಿಸಿ ಇವುಗಳ ಬೆಳವಣಿಗೆಗೆ ದುಡಿದರು. ಅಲ್ಲದೆ ಧಾರವಾಡ ಕರ್ನಾಟಕ ವಿಶ್ವವಿದ್ಯಾಲಯದ ಸ್ಥಾಪನೆಯಲ್ಲಿಯೂ ಇವರು ವಹಿಸಿದ ಪಾತ್ರ ಮಹತ್ವದ್ದಾಗಿದೆ ಎಂದರು.

**ಶರಣ ಸಾಹಿತ್ಯದ ಶೋಧಕರು;** ಶರಣರ ಜೀವನ ಮೌಲ್ಯಗಳನ್ನು ಕಾಲಾತೀತವಾದ ಕಾಲ ಗರ್ಭದಲ್ಲಿ ಹುದುಗಿ ಹೋಗಿದ್ದ ವಚನ ಸಾಹಿತ್ಯವೆಂಬ ಅನರ್ಘ್ಯ ರತ್ನವನ್ನು ಶೋಧಿಸಿ, ಅನ್ವೇಷಿಸಿ ಸಂಗ್ರಹಿಸಿ, ಸಂಪಾದಿಸಿ ಪ್ರಕಟಿಸಿ ಸಂಶೋಧನಾ ಕ್ಷೇತ್ರಕ್ಕೆ ದೊಡ್ಡ ಕೊಡುಗೆ ನೀಡಿದ್ದಾ–ರೆ. ಒಂದು ವೇಳೆ ಶರಣ ಸಾಹಿತ್ಯದ ಕಡೆಗೆ ಲಕ್ಷ್ಯ ಹರಿಸದೇ ಇದ್ದರೆ ಇಂದು ನಮಗೆ ಶಿವಶರಣರ ವಚನಗಳು ದೊರಕುತ್ತಿರಲಿಲ್ಲ.

ಕತ್ತಲ ಕಾಲ ಗರ್ಭದಲ್ಲಿದ್ದ ವಚನಗಳನ್ನು ಒಬ್ಬ ಸಾಮಾನ್ಯ ವಕೀಲರಾಗಿದ್ದುಕೊಂಡು ಶರಣ–ರ ತತ್ವಾದರ್ಶಗಳು ಅವರೊಳಗಿದ್ದ ವೈಚಾರಿಕ ಮಾನವ ಪ್ರಜ್ಞೆಯನ್ನು ಎತ್ತಿ ತೋರಿಸಿದ ಕೀರ್ತಿಗೆ ಭಾಜನರಾಗಿದ್ದಾರೆ ಎಂದರು.

ಇದಕ್ಕೂ ಮೊದಲು ನಗರದ ಡಾ.ಬಿ. ಆರ್.ಅಂಬೇಡ್ಕರ್ ವೃತ್ತದಿಂದ ಪಂಡಿತ್ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದವರಿಗೆ ಮೆರೆವಣಿಗೆ ಮಾಡಲಾಯಿತು. ಇದೇ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕಿ ಮಂಗಳ ನಾಯಕ, ಜಿಲ್ಲಾ ಶಾಲಾ ಶಿಕ್ಷಣ ಇಲಾಖೆಯ ದೈಹಿಕ ಶಿಕ್ಷಣ ಪರೀವಿಕ್ಷರಾದ ಪರುಶುರಾಮ ಸೇರಿದಂತೆ ಹಿರಿಯ ಸಾಹಿತಿಗಳು, ವಿವಿಧ ಶಾಲಾ ವಿದ್ಯಾರ್ಥಿಗಳು, ಶಿಕ್ಷಕರು, ಕಾರ್ಯಕ್ರಮದಲ್ಲಿ ಇದ್ದರು.

# ಭಾವಗಳ ತಿಜೋರಿಯೇ ಭಾವ ಯಾನ

**ಕೃತಿ:ಭಾವಯಾನ**
**ಪ್ರಕಾಶಕರು:ಕಥಾ ಬಿಂದು ಪ್ರಕಾಶನ ಮಂಗಳೂರು**
**ಕವಯತ್ರಿ: ದರ್ಶಿನಿ ಪ್ರಸಾದ್**




ಪುಸ್ತಕಗಳು ಜ್ಞಾನದ ಮೂಲ ರೂಪ. ಎಣಿಸಲಾರದಷ್ಟು ಪುಸ್ತಕಗಳನ್ನು ಓದಿದರೂ ಕೆಲವು ನಮ್ಮನ್ನು ಸರಾಗವಾಗಿ ಓದಿಸಿಕೊಂಡು ಕುತೂಹಲದ ಲೋಕವನ್ನು ಅನಾವರಣ ಮಾಡಿ ಕ್ಷಣದಲ್ಲೇ ಮನವನ್ನು ಬಿಗಿದಪ್ಪುತ್ತದೆ. ಇಂತಹ ಪುಸ್ತಕಗಳಲ್ಲಿ ನಲ್ಮೆಯ ಸಹೋದರಿ ಶ್ರೀಮತಿ ದರ್ಶಿನಿ ಅಕ್ಕಾ ಬರೆದಿರುವ "ಭಾವಯಾನ"ಎಂಬ ಶಿರೋನಾಮೆ ಹೊತ್ತ ಚುಟುಕುಗಳ ಸಂಕಲನವು ಒಂದು.

ರವಿ ಕಾಣದ್ದನ್ನು ಕವಿ ಕಾಣುವ ಎಂಬ ಮಾತು ಅಕ್ಷರಶಃ ಈ ಸಂಕಲನಕ್ಕೆ ಸಾಕ್ಷಿಯಾಗಿದೆ.ಕೆಲವೇ ಕೆಲವು ಸಾಲುಗಳಲ್ಲಿ ವೈಶಿಷ್ಟ್ಯವಾದ ಪದಗಳನ್ನು ಹೆಣೆದು ಚುಟುಕು ಬರೆಯುವುದರಲ್ಲಿ ನಿಸ್ಸಿಮರು ಎಂಬುದು ಇದರಲ್ಲಿ ಸಾಬೀತಾಗಿದೆ. ಈಗಾಗಲೇ ಇವರ ಚೊಚ್ಚಲ ಕವನ ಸಂಕಲನ "ಮನದನಿಯ ಚಿತ್ತಾರ"ಓದುಗರ ಮನವನ್ನು ಗೆದ್ದು ಸಾಹಿತ್ಯದ ಸೃಜನಶೀಲತೆಗೆ ದಿಕ್ಸೂಚಿಯಾಗಿದೆ.ಈ ರೀತಿಯಲ್ಲೇ ಕಥಾ ಬಿಂದು ಪ್ರಕಾಶನದಿಂದ ಪ್ರಕಟಗೊಂಡ ಈ ಚುಟುಕು ಸಂಕಲನ ಓದುಗರ ಮನದಂಗಳದಲ್ಲಿ ಮನೆ ಮಾಡಿದೆ

ದರ್ಶಿನಿ ಪ್ರಸಾದ್ ಅವರು ಗೃಹಿಣಿಯಾಗಿದ್ದರೂ. ಸಾಹಿತ್ಯದತ್ತ ಒಲವು ಬೆಳೆಸಿಕೊಂಡು ಮುಖಪುಟದ ವಿವಿಧಾ ಬಳಗಗಳಲ್ಲಿ ಕವನ,ಚುಟುಕು,ಲೇಖನ ಅಲ್ಲದೆ ಇತರ ಸಾಹಿತ್ಯ ಪ್ರಕಾರಗಳಲ್ಲಿ ಕೃಷಿ ಮಾಡುತ್ತಲಿರುವುದು.ಅಲ್ಲದೆ ಪರಿಸರದ ಮೇಲೆ ಇವರಿಗೆ ಎಲ್ಲಿಲ್ಲದ ಪ್ರೀತಿ ಹಾಗಾಗಿ ತಮ್ಮ ಮನೆಯಲ್ಲಿಯೇ ವಿವಿಧ ರೀತಿಯ ಫಲಪುಷ್ಪ ಭರಿತ ಸಸ್ಯ ಸಂಕುಲಗಳನ್ನು ಬೆಳೆಸುವುದರ ಜೊತೆಗೆ ಸದಾ ಅವುಗಳ ಪಾಲನೆ ಪೋಷಣೆಯಲ್ಲಿ ತೊಡಗಿ-ಕೊಂಡು ಮುದ್ದು ಮಕ್ಕಳಂತೆ ಸಲಹಿ ಇಂದಿನ ಯುವ ಜನಾಂಗಕ್ಕೆ ಸ್ಫೂರ್ತಿಯಾಗಿರುವುದು ನಿಜಕ್ಕೂ ಹೆಮ್ಮೆಯ ಸಂಗತಿ.


ಇದೆ ರೀತಿಯಲ್ಲಿ ನಮ್ಮ ನಾಡಿನ ಅನ್ನದಾತ,ಕೋಟಿ ಕೊಟ್ಟರು ಸಿಗದ ಸಮಯದ ಬಗ್ಗೆ ಜೀವವನ್ನೇ ಬಲಿತೆಗೆದುಕೊಳ್ಳುವ ಕೋಪ,ಅಕ್ಷರಧಾತನಾದ ಶಿಕ್ಷಕರ ಬಗ್ಗೆ ,ಮಗುವಿನ ಏಳಿಗೆಗೆ ಪೂರಕವಾದ ಶಿಸ್ತಿನ ಬಗ್ಗೆ,ಜೀವನಕ್ಕೆ ಸವಾಲೆಸೆಯುವ ಪರೀಕ್ಷೆಗಳ ಬಗ್ಗೆ ಚುಟುಕುಗಳನ್ನು ಬರೆದಿದ್ದಾರೆ.

ಈ ಚುಟುಕು ಸಂಕಲನದ ಹೆಸರೇ ವಿಭಿನ್ನ , ವಿಶಿಷ್ಟ, ಭಾವಗಳನು ಪೋಣಿಸುತ್ತಾ ತಮ್ಮದೇ ಆದ ರೀತಿಯಲ್ಲಿ ಒಟ್ಟು 120 ಚುಟುಕುಗಳನು ಒಳಗೊಂಡಿದ್ದು ಒಂದಕ್ಕಿಂತ ಒಂದು ಅರ್ಥಪೂರ್ಣವಾಗಿದ್ದು ಓದಿದಾಗ ವಾವ್ ಎಂಬ ಉದ್ಗಾರವು ಹೊಮ್ಮುವುದರಲ್ಲಿ ಸಂಶಯವಿಲ್ಲ. ನಾನಿಲ್ಲಿ ನನಗೆ ಇಷ್ಟವಾದ ಮನಸಿಗೆ ಹತ್ತಿರವಾದ ಒಂದು ಚುಟುಕನ್ನು ಉಲ್ಲೇಖಿಸುತ್ತೇನೆ.

ಉಗಮ
ಪರಿಚಯ ಬಾಂಧವ್ಯಕ್ಕೆ ಬೆಸುಗೆ
ಉಗಮವಾಗುವುದು ಸ್ನೇಹ ಸಲುಗೆ
ಅರಿವಿಲ್ಲದೆ ಬೆಳೆಯುವ ಆತ್ಮೀಯತೆಗೆ
ಕಾರಣ ಸಣ್ಣದೊಂದು ಮುಗುಳುನಗೆ

ಈ ಚುಟುಕು ಸ್ನೇಹವು ಹೇಗೆ ಉಗಮಿಸಿತು ಎಂಬುದರ ಬಗ್ಗೆ ಅರ್ಥವತ್ತಾಗಿ ಬರೆದಿದ್ದಾರೆ. ಜಗದಲಿ ಪ್ರತಿಯೊಬ್ಬ ಮನುಜನ ನಡುವೆ ಬಾಂಧವ್ಯ ಬೆಸೆಯುವುದು ಪರಿಚಯದ ಆಧಾರದ ಮೇಲೆ ,ಬರು ಬರುತ್ತ ಪರಿಚಯವಾಗುತ ಮನಗಳ ನಡುವೆ ಸಲುಗೆಯು ಬೆಸೆದು ನಮಗೆ ಅರಿವಿಲ್ಲದ ಹಾಗೆ ಆತ್ಮೀಯತೆಯ ಬೆಳೆದು ಪರಸ್ಪರ ಮೊಗದಲ್ಲಿ ಮುಗುಳುನಗೆ ಬೀರುತ್ತಾ ಅತ್ಯಾಪ್ತರಾಗುತ್ತಾರೆ ಎಂಬುದನ್ನು ನಾಲ್ಕೇ ಸಾಲುಗಳಲ್ಲಿ

ಬಣ್ಣಿಸಿದ್ದು ಇವರ ಸಾಹಿತ್ಯಿಕ ಜ್ಞಾನಕ್ಕೆ ಕೈಗನ್ನಡಿಯಾಗಿದೆ. ಭಾವಗಳ ಬಳ್ಳಿಯ ಆಸರೆಯಲಿ ಕವಿ ಬರೆಯುವ ಪ್ರತಿಯೊಂದು ಸಾಲು ಕೂಡ ಸಾಹಿತ್ಯಿಕ ಲೋಕದ ದ್ರುವತಾರೆ ಎಂಬುದಕ್ಕೆ ಈ ಚುಟುಕುಗಳ ಗುಚ್ಛ ಉದಾಹರಣೆ. ತಮ್ಮ ಮನದ ಅಂತರಾಳವನ್ನು ಕೆಣಕುವ ಕೋಪ,ನಿರೀಕ್ಷೆ,ಭ್ರಮೆ,ಸ್ವಭಾವ, ಅಹಂಕಾರದ ಬಗ್ಗೆ ಬರೆಯುತ್ತ ಪ್ರಕೃತಿಯನ್ನು ತನ್ನ ಲೇಖನಿಯಲ್ಲಿ ಸೆರೆಹಿಡಿದಿದ್ದು ಇವರ ದೂರದೃಷ್ಟಿಗೆ ಹಿಡಿದ ಕೈಗನ್ನಡಿ. ಕವಿಗೆ ಶಬ್ದಗಳನ್ನು ಜೋಡಿಸುವುದು ಎಷ್ಟು ಮುಖ್ಯವೋ ಭಾವಪೂರ್ಣದಿ ಕವಿತೆಗೆ ಜೀವ ತುಂಬುದು ಅತಿ ಮುಖ್ಯ.ಈ ಮಾತಿಗೆ ಇವರ ಚುಟುಕುಗಳು ಪ್ರೇರಣೆಯಾಗಿವೆ.ಈ




ಸಂಕಲನ ಸಾಹಿತ್ಯ ಕ್ಷೇತ್ರದಲ್ಲಿ ಸದ್ದು ಮಾಡಿ ಓದುಗರನ್ನು ಹಿಡಿದಿಡುವಲ್ಲಿ ಯಶಸ್ವಿಯಾಗಲಿ ಎಂದು ಹಾರೈಸುತ್ತಾ ಇನ್ನು ಹೆಚ್ಚು ಮೌಲ್ವಿಕ ಕೃತಿಗಳು ಕನ್ನಡ ಸಾಹಿತ್ಯ ಲೋಕ-ಕೆ ಸಮರ್ಪಣೆಯಾಗಲಿ ಎಂದು ಮನದುಂಬಿ ಹಾರೈಸಿ ಓದುಗರು ಸದಾ ಪ್ರೋತ್ಸಾಹಿಸಿರಿ.ಬೆಳೆಸಿರಿ ಎಂದು ಹೃದಯಪೂರ್ವಕವಾಗಿ ಕೇಳಿಕೊಳ್ಳುವೆ.

**-ಅವಿನಾಶ ಸೆರೆಮನಿ**

# ಪ್ರಜ್ವಲ್ ರೇವಣ್ಣ ಪ್ರಕರಣದಲ್ಲಿ ಭಾರೀ ಸದ್ದು ಮಾಡಿದ್ದ ವಕೀಲ ದೇವರಾಜೇಗೌಡಗೆ ಬಿಗ್ ರಿಲೀಫ್

ಬೆಂಗಳೂರು:-

ಅತ್ಯಾಚಾರ ಪ್ರಕರಣದಲ್ಲಿ ವಕೀಲ ದೇವರಾಜೇಗೌಡಗೆ ಇಂದು ಹೈಕೋರ್ಟ್ ಏಕಸದಸ್ಯ ಪೀಠದಿಂದ ಜಾಮೀನು ಮಂಜೂರು ಮಾಡಿ ನ್ಯಾ.ಎಂ.ಜಿ. ಉಮಾರಿದ್ದ ಪೀಠ ಆದೇಶ ಹೊರಡಿಸಿದೆ. 29 ಡಿಸೆಂಬರ್ 2023ರಂದು ಅತ್ಯಾಚಾರವೆಂದು 01 ಏಪ್ರಿಲ್ 2024ರಂದು ದೂರು ನೀಡಿದ್ದಾರೆ. ಇದಕ್ಕೂ ಮೊದಲು ಹನಿಟ್ರ್ಯಾಪ್ ಎಂದು ಮಾರ್ಚ್ 28 ರಂದು ಮತ್ತು ಮಾರ್ಚ್ 29ರಂದು ಸಂತ್ರಸ್ತೆ ಪತಿ ದೂರು ನೀಡಿದ್ದರು. ಆದ-ರೆ ಅತ್ಯಾಚಾರದ ಬಗ್ಗೆ ಯಾವುದೇ ಚಕಾರವಿಲ್ಲ ಎಂದು ದೇವರಾಜೇಗೌಡ ಪರ ಹಿರಿಯ ವಕೀಲ ಅರುಣ್ ಶ್ಯಾಮ್ ವಾದ ಮಂಡಿಸಿದ್ದಾರೆ.

ಆ ಪ್ರಕರಣದಲ್ಲಿ ಪೊಲೀಸರು ಬಿ ರಿಪೋರ್ಟ್ ಸಲ್ಲಿಸಿದ್ದಾರೆ. ಘಟನೆಯ ಬಳಿಕ 90 ದಿನ ವಿಳಂಬವಾಗಿ ದೂರು ದಾಖಲಿಸಿದ್ದಾರೆ. ವಿಡಿಯೋ ಕರೆಗಳನ್ನು ಏಕೆ ಸ್ವೀಕರಿಸಿದ್ದರೆಂಬುದಕ್ಕೆ ಸಮರ್ಥನೆ ಕಂಡುಬರುತ್ತಿಲ್ಲ ಎಂದಿದ್ದಾರೆ.

ವಕೀಲ ದೇವರಾಜೇಗೌಡಗೆ ಸಂಕಷ್ಟ; ಒಂದು ದಿನ ಎಸ್‌ಐಟಿ ಕಸ್ಟಡಿಗೆ ನೀಡಿದ ಕೋರ್ಟ್

ಹಳೇ ಕೇಸ್‌ಗಳೇ ದೇವರಾಜೇಗೌಡಗೆ ಉರುಳಾಗಿದ್ದರು. ಒಂದೊಂದೇ ಕೇಸ್‌ಗಳು ದಾಖಲಾಗಿದ್ದವು. ಅತ್ಯಾಚಾರ, ಜಾತಿ ನಿಂದನೆ ಕೇಸ್ ಬಳಿಕ ಕರ್ತವ್ಯಕ್ಕೆ ಅಡ್ಡಿ ಆರೋಪದಲ್ಲಿ ಕೂಡ ದೂರು ದಾಖಲಾಗಿತ್ತು. ಹಾಸನದಲ್ಲಿ ಮಾರ್ಚ್ 14ರಂದು ದೇವರಾಜೇಗೌಡ ವಿರುದ್ಧ ಡಿಸಿ ದೂರು ನೀಡಿದ್ದರು. ಡಿಸಿ ದೂರು ಆಧರಿಸಿ ಹಾಸನ ನಗರ ಠಾಣೆಯಲ್ಲಿ ಕೇಸ್ ದಾಖಲಾಗಿತ್ತು.



ಸಂತ್ರಸ್ತೆ ದೂರಿನ ಮೇಲೆ ಅತ್ಯಾಚಾರ ಕೇಸ್‌ನಲ್ಲಿ ವಕೀಲ ದೇವರಾಜೇಗೌಡ ಲಾಕ್ ಆಗಿದ್ದರು. ಮೇ 24ರವರೆಗೂ ನ್ಯಾಯಾಂಗ ಬಂಧನ ಆದೇಶ ಹೊರಡಿಸಲಾಗಿತ್ತು. 14 ದಿನಗಳ ಕಾಲ ನ್ಯಾಯಾಂಗ ಬಂಧನ ಹಿನ್ನೆಲೆಯಲ್ಲಿ ಹಾಸನ ಜಿಲ್ಲಾ ಕಾರಾಗೃಹಕ್ಕೆ ಶಿಫ್ಟ್ ಮಾಡಲಾಗಿತ್ತು.

ಈ ವೇಳೆ ಇನ್ನು ಎಂಟು ದಿನಗಳಲ್ಲಿ ಜೈಲಿನಿಂದ ಹೊರಗೆ ಬರ್ತೀನಿ, ಸತ್ಯಕ್ಕೆ ಜಯ ಸಿಕ್ಕೇ ಸಿಗುತ್ತೆ ಎಂದು ದೇವರಾಜೇಗೌಡ ಹೇಳಿದ್ದರು.

ಹಾಸನ ಸಂಸದ ಪ್ರಜ್ವಲ್ ರೇವಣ್ಣ ಅಶ್ಲೀಲ ವಿಡಿಯೋ ಪ್ರಕರಣದಲ್ಲಿ ಡಿಸಿಎಂ ಡಿಕೆ ಶಿವಕುಮಾರ್ ಕೈವಾಡವಿದೆ ಎಂದು ವಕೀಲ ದೇವರಾಜೇಗೌಡ ಗಂಭೀರ ಆರೋಪ ಮಾಡಿದ್ದರು.

**ಸೂರಜ್ ರೇವಣ್ಣಗೆ 2 ದಿನ ಪೊಲೀಸ್ ಕಸ್ಟಡಿ ವಿಸ್ತರಣೆ**

ಅಸಹಜ ಲೈಂಗಿಕ ದೌರ್ಜನ್ಯ ಆರೋಪ ಪ್ರಕರಣದಲ್ಲಿ ಬಂಧನವಾಗಿರುವ ಜೆಡಿಎಸ್ ವಿಧಾನಪರಿಷತ್ ಸದಸ್ಯ ಸೂರಜ್ ರೇವಣ್ಣಗೆ ಇನ್ನೆರೆಡು ದಿನ ಪೊಲೀಸ್ ಕಸ್ಟಡಿ ವಿಸ್ತರಣೆ-ಯಾಗಿದೆ. 5 ದಿನ ಕಸ್ಟಡಿಗೆ ನೀಡುವಂತೆ ಪೊಲೀಸರು ಮನವಿ ಮಾಡಿದ್ದರು. ಆದ್ರೆ, 42ನೇ ಎಸಿಎಂಎಂ ಕೋರ್ಟ್, ಸೂರಜ್‌ಗೆ ಎರಡು ದಿನ ಪೊಲೀಸ್ ಕಸ್ಟಡಿ ವಿಸ್ತರಣೆ ಮಾಡಿ ಆದೇಶ ಹೊರಡಿಸಿದೆ.

# ಆಧ್ಯಾತ್ಮದ ಜ್ಞಾನ ಬದುಕಿಗೆ ಬೆಳಕು ನೀಡುತ್ತದೆ: ಪಂಡಿತ ಮಲ್ಲಿಕಾರ್ಜುನ ಶಾಸ್ತ್ರಿ

ಕಲಬುರಗಿ:-

ಮಾನವನ ಬದುಕಿಗೆ ಅಧ್ಯಾತ್ಮದ ಜ್ಞಾನವು ಅರಿವು ಮೂಡಿಸುವುದಲ್ಲದೆ, ಬೆಳಕು ನೀಡುತ್ತದೆ ಎಂದು ಪುರಾಣ ಪಂಡಿತ ಮಲ್ಲಿಕಾರ್ಜುನ ಶಾಸ್ತ್ರಿ ಅಭಿಪ್ರಾಯ ಪಟ್ಟಿದ್ದಾರೆ.

ಜಯನಗರ ಶಿವಮಂದಿರದಲ್ಲಿ ಸೋಮವಾರ ಜಯನಗರ ಶಿವಮಂದಿರ ಅಭಿವೃದ್ಧಿ ಟ್ರಸ್ಟ್ ವತಿಯಿಂದ ಹಮ್ಮಿಕೊಂಡಿದ್ದ "ಜ್ಞಾನ ಜ್ಯೋತಿ ಬೆಳಕು"ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿ-ಯಾಗಿ ಮಾತನಾಡಿದ ಅವರು ಮಾನವನ ಪಾಪ,ಪುಣ್ಯ ಕೆಲಸಗಳು ಯೋಚನೆಗೆ ತಕ್ಕಂತೆ ಇರುತ್ತವೆ.ಅಂತರಾತ್ಮಕ್ಕೆ ಮಾಡುವ ವಂಚನೆ ಮಹಾಪಾಪ.ಪ್ರತಿಯೋಬ್ಬರೂ ವಿವೇಚನಾಶೀಲರಾದರೆ ಬದುಕು ಸುಂದರಗೊಳಿಸಬಹುದು.ಇದಕ್ಕೆಲ್ಲಾ ಅಧ್ಯಾತ್ಮದ ಜ್ಞಾನ ಮುಖ್ಯವಾಗಿದೆ ಎಂದ ಅವರು ಜಗದೋದ್ಧಾರಕ ಪರಮಾತ್ಮ ಶಾಂತಿಪ್ರಿಯ. ಅವನ ಮಕ್ಕಳಾದ ನಾವು,ನಮ್ಮ ಆತ್ಮವು ಶಾಂತ ಚಿತ್ತದಿಂದ ಕೂಡಿರಬೇಕು ಎಂದು ಅವರು ತಿಳಿಸಿದರು.

ಟ್ರಸ್ಟ್ ಅಧ್ಯಕ್ಷ ಲಿಂಗರಾಜ ಸಿರಗಾಪೂರ ಅವರು ಮಾತನಾಡಿ ಆಸೆಯು ಹೆಚ್ಚಾದಂತೆ ಇಂದು ಎಲ್ಲೇಡೆ ಮೋಸ,ವಂಚನೆ, ದ-ರೋಡೆಯಂಥ ಕೃತ್ಯಗಳು ನಡೆಯುತ್ತಿವೆ. ಇದಕ್ಕೆಲ್ಲಾ ಜ್ಞಾನದ ಕೊರತೆ ಕಾರಣವಾಗಿದೆ. ಆಸೆ ಬಿಟ್ಟು ಸರಳ ಜೀವನದೆಡೆ ಸಾಗಿದರೆ ಕಷ್ಟಗಳಿಂದ ಪಾರಾಗಬಹುದು.ಮುಂದೆಯೂ



ಜಯನಗರ ಶಿವಮಂದಿರಲ್ಲಿ ಶ್ರಾವಣ ಮಾಸದಲ್ಲಿ ಪ್ರವಚನ ಜೊತೆಗೆ ಇಂಥ ಅಧ್ಯಾತ್ಮೀಕ ಕಾರ್ಯಕ್ರಮಗಳು ನಿರಂತರ ನಡೆಯಲಿವೆ ಎಂದರು.

ಪ್ರಧಾನ ಕಾರ್ಯದರ್ಶಿ ಸೂರ್ಯಕಾಂತ ಕೆ.ಬಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ಮದಲ್ಲಿ ಟ್ರಸ್ಟ್ ಪದಾಧಿಕಾರಿಗಳಾದ ಸಿದ್ಧಲಿಂಗ ಗುಬ್ಬಿ, ಬಸವರಾಜ ಮಾಗಿ, ಶಿವಪುತ್ರಪ್ಪ ಮರಡಿ,ಶಿವಕುಮಾರ ಪಾಟೀಲ, ಬಂಡೆಪ್ಪ ಕೇಸೂರ, ಮಲ್ಲಯ್ಯ ಸ್ವಾಮಿ ಗಂಗಾಧರಮಠ , ಹಿರಿಯ ಸದಸ್ಯರಾದ ಬಸವರಾಜ ಅನ್ವರಕರ,ಗುರುಪಾದಪ್ಪ ಕಾಂತಾ, ವೀರಪ್ಪ ಹುಡುಗಿ, ಮಲ್ಲಿಕಾರ್ಜುನ ಕಲ್ಲಾ, ಬಸವರಾಜ ಪುರ್ಮಾ, ಮಲ್ಲಯ್ಯ ಸ್ವಾಮಿ ಬೀದಿಮನಿ, ವಿನೋದ ಪಾಟೀಲ, ಸುಭಾಷ್ ಅಮೋಜಿ ಮಹಿಳಾ ಸದಸ್ಯರಾದ ಅನುರಾಧ ಕುಮಾರಸ್ವಾಮಿ, ಸುಷ್ಮಾ ಮಾಗಿ,ಸುರೇಖಾ ಬಾಲಕೊಂದೆ, ಸುಜಾತಾ ಭೀಮಳ್ಳಿ, ಗೀತಾ ಸಿರಗಾಪೂರ ಸೇರಿದಂತೆ ಅನೇಕ ಹಿರಿಯರು,ಮುಖಂಡರು ಹಾಗೂ ಮಹಿಳೆಯರು ಉಪಸ್ಥಿತರಿದ್ದರು.

# ಶಸ್ತ್ರಚಿಕಿತ್ಸಕ ಡಾ.ವಿಜಯಕುಮಾರ್‌ಗೆ ಬೀಳ್ಕೊಡುಗೆ

ಕೋಲಾರ:-

ಜಿಲ್ಲಾ ಎಸ್‌ಎನ್‌ಆರ್ ಆಸ್ಪತ್ರೆಯ ಜಿಲ್ಲಾ ಶಸ್ತ್ರ ಚಿಕಿತ್ಸಕರಾಗಿ ಸೇವೆ ಸಲ್ಲಿಸುತ್ತಿದ್ದ ಡಾ.ಎಸ್. ಎನ್.ವಿಜಯಕುಮಾರ್ ಅವರನ್ನು ಆರೋಗ್ಯ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿ ಆತ್ಮೀಯವಾಗಿ ಸನ್ಮಾನಿಸಿ ಬೀಳ್ಕೊಟ್ಟರು.

ಈ ಸಂದರ್ಭದಲ್ಲಿ ಮಾತನಾಡಿದ ವಿಜಯಕುಮಾರ್, ತಮ್ಮ ಸೇವಾ ಅವಧಿಯಲ್ಲಿ ಉತ್ತಮ ಕೆಲಸ ಮಾಡಿದ ಆತ್ಮತೃಪ್ತಿ ಇದೆ, ನನ್ನ ಕರ್ತವ್ಯ ನಿರ್ವಹಣೆಗೆ ಜಿಲ್ಲಾಧಿಕಾರಿಗಳು, ಜಿಪಂ ಸಿಇಒ ಸೇರಿದಂತೆ ಆರೋಗ್ಯ ಇಲಾಖೆಯ ಅಧಿಕಾರಿಗಳು ವೈದ್ಯರು, ಶುಶ್ರೂಷಕಿಯರು,ಸಿಬ್ಬಂದಿ ಎಲ್ಲರೂ ಸಹಕಾರ ನೀಡಿದ್ದು ಅವರಿಗೆ ಧನ್ಯವಾದ ಸಲ್ಲಿಸುವುದಾಗಿ ತಿಳಿಸಿದರು.

ಆರೋಗ್ಯ ಇಲಾಖೆ ಪ್ರಯೋಗಶಾಲಾ ತಾಂತ್ರಿಕರ ಸಂಘದ ನಾರಾಯಣಪ್ಪ ಮಾತನಾಡಿ, ಆರೋಗ್ಯ ಇಲಾಖೆ ಹಾಗೂ ಜಿಲ್ಲಾಸ್ಪತ್ರೆಯಲ್ಲಿ ವಿವಿಧಹುದ್ದೆಗಳಲ್ಲಿ ಸೇವೆ ಸಲ್ಲಿಸಿ ಇತರರಿಗೆ ಮಾದರಿಯಾಗಿದ್ದ



ವಿಜಯಕುಮಾರ್ ಅವರ ನಿವೃತ್ತಿ ಜೀವನ ಸುಖಕರವಾಗಿರಲಿ ಎಂದು ಹಾರೈಸಿದರು.

ಜಿಲ್ಲಾ ಆಸ್ಪತ್ರೆಯಲ್ಲಿ ಜಿಲ್ಲಾ ಶಸ್ತ್ರ ಚಿಕಿತ್ಸಕರು ಹಾಗು ಪ್ಯಾರಾ ಮೆಡಿಕಲ್ ಕಾಲೇಜಿನ ಪ್ರಾಂಶು ಪಾಲರ ಹುದ್ದೆಯಲ್ಲಿ ಕಾರ್ಯ ನಿರ್ವಹಿಸಿ ಇದೀಗ ನಿವೃತ್ತರಾಗಿರುವ ವಿಜಯಕುಮಾರ್ ಅವರು, ಕೋಲಾರ ಜಿಲ್ಲೆಯ ಶ್ರೀನಿವಾಸಪುರ ತಾಲ್ಲೂಕಿನ ಶೆಟ್ಟಿಹಳ್ಳಿಯಲ್ಲಿ ವಿಮಲಮ್ಮ ನಾರಾಯಣನ್ ದಂಪತಿಗಳ ಮಗನಾಗಿ ಜನಿಸಿದ ಇವರು ತನ್ನ 1981ರಿಂದ 1987 ವೈದ್ಯಕೀಯ ಪದವಿ ಬಳ್ಳಾರಿ ಸರ್ಕಾರಿ ಮೆಡಿಕಲ್ ಕಾಲೇಜಿನಲ್ಲಿ ಮುಗಿಸಿ ನಂತರ ಮೈಸೂರು ವೈದ್ಯಕೀಯ ಕಾಲೇಜಿನಲ್ಲಿ ಮೂಳೆ ತಜ್ಞರಾಗಿ ಸ್ನಾತಕೋತ್ತರ ಪದವಿ ಮುಗಿಸಿದ್ದಾರೆ ಎಂದು ತಿಳಿಸಿದರು.

1991ರಲ್ಲಿ ಮುಳಬಾಗಿಲು ಸಾರ್ವಜನಿಕ ಆಸ್ಪತ್ರೆಯಲ್ಲಿ ಮೊದಲು ವೈದ್ಯರಾಗಿ ಸೇರಿ ಅಲ್ಲಿ ಕರ್ತವ್ಯ ನಿರ್ವಹಿಸಿ, ನಂತರ ಅಲ್ಲಿಂದ ತಾಯಲೂರು ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಕೆಲಸ, ನಂತರ ಮುಳಬಾಗಿಲು ಸಾರ್ವಜನಿಕ ಆಸ್ಪತ್ರೆಯಲ್ಲಿ ಕರ್ತವ್ಯ ನಿರ್ವಹಿಸಿದ್ದು, ಇದಾದ ನಂತರ ಯಲ್ದೂರು ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಕೆಲಸ ಮಾಡಿದ್ದಾರೆ.

ಇದಾದ ನಂತರ ಜಿಲ್ಲಾ ಕ್ಷಯ-ರೋಗ ನಿವಾರಣಾ ಅಧಿಕಾರಿಯಾಗಿ ಸೇವೆ ಸಲ್ಲಿಸಿದ ವಿಜಯಕುಮಾರ್, ಕೀಲು ಮತ್ತು ಮೂಳೆ ತಜ್ಞರಾಗಿ ಜಿಲ್ಲಾ ಆಸ್ಪತ್ರೆಯಲ್ಲಿ ಕರ್ತವ್ಯ ಮುಗಿಸಿ ನಂತರ ಜಿಲ್ಲಾ ಆರೋಗ್ಯಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಾಗಿ ಸೇವೆ ಸಲ್ಲಿಸಿದರು.ನಂತರ 2022ರಲ್ಲಿ ಜಿಲ್ಲಾಆಸ್ಪತ್ರೆ ಜಿಲ್ಲಾ ಶಸ್ತ್ರ ಚಿಕಿತ್ಸಕರು ಹಾಗು ಪ್ಯಾರಾ ಮೆಡಿಕಲ್ ಕಾಲೇಜಿನ ಪ್ರಾಂಶು ಪಾಲರ ಹುದ್ದೆಯಲ್ಲಿ ಕರ್ತವ್ಯ ನಿರ್ವಹಿಸಿ ಇದೀಗ ಸೇವೆಯಿಂದ ನಿವೃತ್ತರಾಗಿದ್ದಾರೆ.

ಸದಾ ಜನಸ್ನೇಹಿಯಾಗಿ ರೋಗಿಗಳೊಂದಿಗೆ ಉತ್ತಮ ಬಾಂಧವ್ಯ ಹೊಂದಿದ್ದ ಡಾ.ವಿಜಯಕುಮಾರ್ ಅವರ ನಿವೃತ್ತಿ ಜೀವನ ಸುಖಕರವಾಗಿರಲಿ, ನಿವೃತ್ತಿ ನಂತರವೂ ರೋಗಿಗಳಿಗೆ ಅವರ ಸೇವೆ ಸಿಗಲಿ ಎಂದು ಪ್ರಾರ್ಥಿಸಲಾಯಿತು.

ಈ ಸಂದರ್ಭದಲ್ಲಿ ಆಸ್ಪತ್ರೆಯ ವೈದ್ಯರು, ಸಿಬ್ಬಂದಿ, ಶುಶ್ರೂಷಕಿಯರು ಸೇರಿದಂತೆ ಹಲವಾರು ಮಂದಿ ಹಾಜರಿದ್ದರು.

# ನಂದಿನಿ ಹಾಲಿನ ದರ ಏರಿಕೆಗೆ ಖಂಡಿಸಿ ಬಿಜೆಪಿ ಪ್ರತಿಭಟನೆ

ದಾವಣಗೆರೆ:-

ನಂದಿನಿ ಹಾಲಿನ ದರದಲ್ಲಿ ಏರಿಕೆ ಮಾಡಿರುವುದನ್ನು ವಿರೋಧಿಸಿ ಬಿಜೆಪಿ ರೈತಮೋರ್ಚಾ ಕಾರ್ಯಕರ್ತರು ನಗರದಲ್ಲಿ ಬೃಹತ್ ಪ್ರತಿಭಟನೆ ನಡೆಸಿದರು.ನಗರದ ಜಯದೇವ ವೃತ್ತದಿಂದ ಪ್ರತಿಭಟನಾ ಮೆರವಣಿಗೆ ಮೂಲಕ ಗಾಂಧಿ ವೃತ್ತದ ಮಾರ್ಗವಾಗಿ ಉಪವಿಭಾಗಾಧಿಕಾರಿ ಕಚೇರಿಗೆ ತೆರಳಿದ ಕಾರ್ಯಕರ್ತರು ಹಾಲಿನ ದರ ಕಡಿಮೆ ಮಾಡುವಂತೆ ಮನವಿ ಮಾಡಿದರು.ರಾಜ್ಯದಲ್ಲಿ ನಿತ್ಯ ಹಾಲಿನ ಉತ್ಪಾದನೆ 1 ಕೋಟಿ ಲೀಟರ್ ಸನಿಹದಲ್ಲಿದೆ ಎಂಬ ಕಾರಣದಿಂದ ಹಾಲಿನ ದರ ಹೆಚ್ಚಳ ಮಾಡಿರುವುದು ಹಾಸ್ಯಾಸ್ಪದ. ಯಾವುದೇ ಉತ್ಪನ್ನಗಳ ಅಭಾವವಾದಾಗ ದರ ಹೆಚ್ಚಳವಾಗುವುದು ಸಾಮಾನ್ಯ. ಆದರೆ ಉತ್ಪನ್ನ ಅಧಿಕವಾಗಿದೆ ಎಂದು ದರ ಹೆಚ್ಚಳ ಮಾಡುವುದು ಹುಚ್ಚು ಸರ್ಕಾರದ ಪರಮಾವಧಿ ಎಂದು ಕಿಡಿಕಾರಿದರು.ಹಾಲು ಪೋಷಕಾಂಶಗಳ ಅಗರ. ಇದನ್ನು ರಾಜ್ಯದ ಕಾಂಗ್ರೆಸ್ ಸರ್ಕಾರ ಹುಚ್ಚು ಹುಚ್ಚಾಗಿ ನಿರ್ವಹಣೆ ಮಾಡುತ್ತಿದೆ. ಹಾಲು ಉತ್ಪಾದನೆ ಹೆಚ್ಚಾಗಿರುವುದರಿಂದ 1 ಲೀಟರ್ ಪ್ಯಾಕೆಟ್ ನಲ್ಲಿ 100 ಎಂಎಲ್ ಹೆಚ್ಚಿಸಿ, ಹಳೇ ದರಕ್ಕೆ ಮಾರಾಟ ಮಾಡಿದ್ದರೆ ಕ್ಷೀರ ಭಾಗ್ಯ ಎಂದು ಜನ ಪರವಾಗಿ ಇರುತ್ತಿತ್ತು. ಆದರೆ ಹಾಲಿನ ದರ ಹೆಚ್ಚಳ ಮಾಡಿರುವುದು ಜನ ವಿರೋಧಿಯಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು. ರಾಜ್ಯದಲ್ಲಿ ಒಟ್ಟು 15 ಹಾಲು ಒಕ್ಕೂಟಗಳಲ್ಲಿ 7,98,691 ಹಾಲು




ಉತ್ಪಾದಕ ರೈತರಿದ್ದಾರೆ. ಇವರಿಗೆ ಆಗಸ್ಟ್, 2023 ರಿಂದ ಮಾರ್ಚ್, 2024 ರವರೆಗೆ ಒಟ್ಟು 8 ತಿಂಗಳ 1083 ಕೋಟಿ ರೂ ಪ್ರೋತ್ಸಾಹ ಧನ ಬಾಕಿ ಇದೆ. ಆದರೆ ಎಪ್ರಿಲ್, 2024ನೇ ತಿಂಗಳ ಪ್ರೋತ್ಸಾಹ ಧನ 109 ಕೋಟಿ ಬಿಡುಗಡೆ ಮಾಡಿದೆ. 2023-24ನೇ ಸಾಲಿನ ಪ್ರೋತ್ಸಾಹ ಧನ ಬಿಡುಗಡೆ ನೆನೆಗುದಿಗೆ ಬಿದ್ದಿದೆ. ಇದರಿಂದ ಹಾಲು ಉತ್ಪಾದಕ ರೈತರು ತೀವ್ರ ಆರ್ಥಿಕ ಸಂಕಷ್ಟದಲ್ಲಿದ್ದಾರೆ. ತಕ್ಷಣ ಹಾಲಿನ ಪ್ರೋತ್ಸಾಹ ಧನ ಬಿಡುಗಡೆ ಮಾಡಬೇಕು ಎಂದು ಒತ್ತಾಯಿಸಿದರು.ಉತ್ತಮ ಮಳೆಯಾಗಬಹುದು ಎಂಬ ಹವಾಮಾನ ಇಲಾಖೆ ಮುನ್ಸೂಚನೆಯಿಂದ ರೈತರು ಸಂತಸದಿಂದ ಜಮೀನು ಉಳಿಮೆ ಮಾಡಿಕೊಂಡು ಬಿತ್ತನೆಗೆ ಹನಿಯಾದಾಗ ಬಿತ್ತನೆ ಬೀಜಗಳ ದರವನ್ನು ಹೆಚ್ಚಿಸಿ, ರೈತರಿಗೆ ಗಾಯದ ಮೇಲೆ ಬರೆ ಎಳೆದಂತಾಗಿದೆ. ಯಾಂತ್ರಿಕೃತ ಕೃಷಿಗೆ ಪ್ರೋತ್ಸಾಹಿಸುವ ನಿಟ್ಟಿನಲ್ಲಿ ರೈತರು ಖರೀದಿಸಿದ ಡಿಸೇಲ್ ಬೆಲೆಯನ್ನು ಹಿಂದಿನ ಬಿಜೆಪಿ ಸರ್ಕಾರ ರೈತಶಕ್ತಿ ಯೋಜನೆಯನ್ನು ಜಾರಿ ಮಾಡಿ ರೈತರ ಬ್ಯಾಂಕ್ ಖಾತೆಗೆ ಹಣ ಜಮೆ ಮಾಡುತ್ತಿತ್ತು.

ಈ ಯೋಜನೆಯನ್ನು ಕಾಂಗ್ರೆಸ್ ಸರ್ಕಾರ ನಿಲ್ಲಿಸಿದ್ದಲ್ಲದೆ ಪೆಟ್ರೋಲ್ ಡೀಸೆಲ್ ಬೆಲೆ ಏರಿಕೆ ಮಾಡಿ ಯಾಂತ್ರಿಕೃತ ಕೃಷಿ ಚಟುವಟಿಕೆಗಳನ್ನು ದುಬಾರಿ ಮಾಡಿದೆ ಎಂದು ಆಕ್ರೋಶ ವ್ಯಕ್ತಪ ಡಿಸಿದರು. ನೀರಾವರಿ ಪಂಪ್ ಸೆಟ್ ಗಳಿಗೆ ವಿದ್ಯುತ್ ಸಂಪರ್ಕ ಪಡೆ ಯಲು ತಗಲುವ ವೆಚ್ಚವನ್ನು ರೈತರೇ ಭರಿಸಬೇಕೆಂದು ರಾಜ್ಯದ ಕಾಂಗ್ರೆಸ್ ಸರ್ಕಾರ ಆದೇಶಿಸಿದೆ. ಇದು ರೈತರನ್ನು ಬಹಳಷ್ಟು ಕಂಗೇಡಿಸಿದೆ. ಪಂಪ್ ಸೆಟ್ ಗಳಿಗೆ ಬಿಜೆಪಿ ಸರ್ಕಾರ ಇದ್ದಾಗ ಕೇವಲ 25 ಸಾವಿರದಲ್ಲಿ ವಿದ್ಯುತ್ ಸಂಪರ್ಕ ಪಡೆಯುತ್ತಿದ್ದರು. ಈಗ ಕಾಂಗ್ರೆಸ್ ಸರ್ಕಾರದಲ್ಲಿ ವಿದ್ಯುತ್ ಸಂಪರ್ಕ ಪಡೆಯಲು ರೈತರು 3 ರಿಂದ 4 ಲಕ್ಷ ರೂಪಾಯಿ ಖರ್ಚು ಮಾಡುವಂತಾಗಿದೆ. ಇದು ರೈತ ವಿರೋಧಿ ಧೋರಣೆಯಾಗಿದೆ ಎಂದು ಹೇಳಿದರು.

ಭೂ ಸಿರಿ ಯೋಜನೆ,ರೈತ ವಿದ್ಯಾನಿಧಿ ಯೋಜನೆಯನ್ನು ನಿಲ್ಲಿಸಲಾಗಿದೆ. ದುಪ್ಪಟ್ಟು ಹಣವನ್ನು ಟ್ರಾನ್ಸ್ ಫಾರ್ಮರ್ ಗಳಿಗೆ ನೀಡುವಂತಾಗಿದೆ, ಪೆಟ್ರೋಲ್, ಡೀಸೆಲ್ ಬೆಲೆಯನ್ನು ಏರಿಕೆ, ಮುದ್ರಾಂಕ ದರ ಏರಿಕೆ, ಆಸ್ತಿ ನೋಂದಣಿ ಶೇ.30 ರಷ್ಟು ಹೆಚ್ಚಾಗಿದೆ, ಕ್ಷೀರ ಸಮೃದ್ಧಿ ಬ್ಯಾಂಕ್ ಯಾಕೆ ಪ್ರಾರಂಭಿಸಿಲ್ಲ, 824 ರೈತರ ಆತ್ಮ ಹತ್ಯೆಗೆ ಕಾರಣಗಳೇನು, ಮತ್ತು ರೈತರಿಗೆ ಅತ್ಯಂತ ನಿಕಟವಾಗಿರುವ ಇಲಾಖೆ ಕಂದಾಯ ಇಲಾಖೆ, ಆ ಇಲಾಖೆಗಳಲ್ಲಿ ಭ್ರಷ್ಟಾಚಾರ ತಾಂಡವವಾಡುತ್ತಿದೆ ಎಂದು ಕೇಳಿ ಬರುತ್ತಿದೆ ಎಂದು ತಿಳಿಸಿದರು. ಪ್ರತಿಭಟನೆಯಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ರಾಜಶೇಖರ ನಾಗಪ್ಪ, ಪ್ರಧಾನ ಕಾರ್ಯದರ್ಶಿ ಧನಂಜಯ ಕಡ್ಲೇಬಾಳು, ಹರಿಹರ ಶಾಸಕ ಬಿ.ಪಿ.ಹರೀಶ್, ಲೋಕಿ-ಕೆರೆ ನಾಗರಾಜ್, ಡಾ.ನಾಸೀರ್ ಅಹಮದ್, ಪುಷ್ಪಾವಾಲಿ, ಶಿವನಗೌಡ ಸೇರಿದಂತೆ ಇತರರು ಇದ್ದರು.

Editor:S.K.Wadeyar, #69 "VISPATHI", B,Block S.O.G. Colony Davanagere-577005,Karnataka.
Publisher:S.K.Wadeyar, #69 "VISPATHI", B,Block S.O.G. Colony Davanagere-577005,Karnataka.
Printer:S.K.Wadeyar, SUCHITHRA PRINTERs & PUBLISHERs # 69 "VISPATHI",B,Block S.O.G.Colony Davanagere-577005,Karnataka
Owner:S.K.Wadeyar, #69 "VISPATHI", B,Block S.O.G.Colony, Davanagere-577005,Karnataka